

MAG(2)PRB/CR/165/2022-23 Title code: KARKAN27951

# ಮುಂಜಾನೆ ವಾರ್ತೆ

ಇ–ಪೇಪರ್: www.munjanevarthe.com

EDITOR: H.L.AMARANATH

MUNJANE VARTHE

ಸಂಪಾದಕ: ಹೆಚ್.ಎಲ್ ಅಮರನಾಥ್ ಕನ್ನಡ ದಿನಪತ್ರಿಕೆ



ಜಾಹೀರಾತಿಗಾಗಿ ಸಂಪರ್ಕಿಸಿ

9663122276

www.munjanevarthe.com



VOLUME : 2 ISSUE: 191 ಸಂಪುಟ: 02 ಸಂಚಿಕೆ: 191 ಪುಟಗಳು: 04 munjanevarthe WEDNESDAY 04 SEPTEMBER 2024 04 ಬುಧವಾರ ಸೆಪ್ಟೆಂಬರ್ 2024 ₹ 2



ಎನಿವೇರ್ ನೋಂದಣಿ ಯೋಜನೆಯ ಅನುಕೂಲಗಳೇನು? ವಿವರಪುಟ 02

ನೂತನ ಸದಸ್ಯತ್ವ ಅಭಿಯಾನಕ್ಕೆ ಕರ್ನಾಟಕ ರಾಜ್ಯ ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ ಚಾಲನೆ ವಿವರಪುಟ 03

ಕಳಪೆ ಗುಣಮಟ್ಟದ ಹಾಲು ಪೂರೈಕೆ ಮಾಡುವುದು ಅಕ್ಷಮ್ಯ ಅಪರಾಧ ವಿವರಪುಟ 04




## ನಿತ್ಯ ಪಂಚಾಂಗ

04.09.2024
ಬುಧವಾರ
ಸಂವತ್ಸರ: ಕ್ರೋಧಿ.
ಆಯಣ: ದಕ್ಷಿಣಾಯಣ.
ಋತು: ವರ್ಷಾ.
ಮಾಸ: ಭಾದ್ರಪದ.
ಪಕ್ಷ: ಶುಕ್ಲ.
ತಿಥಿ: ಪ್ರತಿಪತ್.
ಶ್ರಾದ್ಧ ತಿಥಿ: ದ್ವಿತೀಯಾ.
ವಾಸರ: ಸೌಮ್ಯವಾಸರ.
ನಕ್ಷತ್ರ: ಉತ್ತರಾಫಾಲ್ಗುಣೀ.
ಯೋಗ: ಸಾಧ್ಯ.
ಕರಣ: ಬವ.
ಸೂರ್ಯೋದಯ : 06:14
ಸೂರ್ಯಾಸ್ತ : 06:38
ರಾಹು ಕಾಲ : 12:00PM To 01:30PM.
ದಿನ ವಿಶೇಷ
04.09.2024
ಚಂದ್ರ ದರ್ಶನ.

## ಮನ್ನಿಸು

ಮನ್ನಿಸು
ಹುಸಿಕೋಪ ಸಾಕು
ವಸಿ ಪ್ರೀತಿ ತೋರ್ಸು
ಕೊಡುಸ್ತೀನಿ ಚಿನ್ನುದ್
ಕಾಸು
ಅಳ್ತಿದೆ ಇಲ್ಲಿ ನಿನ್ ಕೂಸು
ಬೇಗ ಬಂದ್ಬುಡು ವಾಪಸ್ಸು
ಸರಿಯಿಲ್ಲ ಈ ಹಾಳಾದ್ದು
ವಯಸ್ಸು
ನಂಗೋಸ್ಕರ ಕಾಯ್ತಾ
ಕುಂತಾವ್ಳೆ ಪಕ್ಕುದ್
ಮನೆ ಪದ್ದು ಅವುಲ್ಗೂ
ನಿಂದೆ
ವಯಸ್ಸು

– ಪ್ರಕಾಶ್ ಕಶ್ಯಪ್

# ಚಾಮುಂಡಿ ಸನ್ನಿಧಿಯಲ್ಲಿ ಗುಣಮಟ್ಟದ ವ್ಯವಸ್ಥೆ ಕಲ್ಪಿಸದಿದ್ದರೆ ಸೂಕ್ತ ಕ್ರಮ: ಸಿಎಂ ಎಚ್ಚರಿಕೆ

*ಕಾಲ ಕಾಲಕ್ಕೆ ಸಭೆಗಳು ನಡೆದು ಹೆಚ್ಚಿನ ಶ್ರಮ ಶುಚಿತ್ವಕ್ಕೆ ಹಾಕಬೇಕು. ಕಸವನ್ನು ಆಗಿಂದಾಗ್ಗೆತೆರವುಗೊಳಿಸಬೇಕು. ವಾಹನಗಳ ಸಂಖ್ಯೆಯೂ ಹೆಚ್ಚಾಗಿದೆ. ವಾಹನ ನಿಲುಗಡೆಗೆ ಇನ್ನಷ್ಟು ಸುಸಜ್ಜಿತ ವ್ಯವಸ್ಥೆ ಕಲ್ಪಿಸಬೇಕಿದೆ. ಶ್ರೀ ಕ್ಷೇತ್ರದ ಅಭಿವೃದ್ಧಿಗೆ ಹಣಕ್ಕೆ ತೊಂದರೆ ಇಲ್ಲ. ಕೇಳಿದಷ್ಟು ಹಣವನ್ನು ಕೇಳಿದಾಗಲೆಲ್ಲಾ ಒದಗಿಸಲಾಗುತ್ತಿದ್ದರೂ ಕೆಲಸಗಳು ಮಾತ್ರ ನಿರೀಕ್ಷಿತ ವೇಗದಲ್ಲಿ ನಡೆಯುತ್ತಿಲ್ಲ. ಇದನ್ನು ನಾನು ಸಹಿಸುವುದಿಲ್ಲ. ಸಮಯಕ್ಕೆ ಸರಿಯಾಗಿ ಕೆಲಸ ಮಾಡದಿದ್ದರೆ ನಾನು ಮುಲಾಜಿಲ್ಲದೆ ಕ್ರಮ ತೆಗೆದುಕೊಳ್ಳುತ್ತೇನೆ ಎಂದು ಎಚ್ಚರಿಸಿದರು.*

ಚಾಮುಂಡಿ ತಾಯಿ ಸನ್ನಿಧಿಯಲ್ಲಿ ಗುಣಮಟ್ಟದ ವ್ಯವಸ್ಥೆ ಕಲ್ಪಿಸದಿದ್ದರೆ ಸಂಬಂಧಪಟ್ಟವರ ಮೇಲೆ ಸೂಕ್ತ ಕ್ರಮ ಕೈಗೊಳ್ಳುವುದು ಖಚಿತ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎಚ್ಚರಿಸಿದರು. ಶ್ರೀ ಚಾಮುಂಡೇಶ್ವರಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಮೊದಲ ಸಭೆಯನ್ನು ತಾಯಿ ಸನ್ನಿಧಿಯಲ್ಲೇ ನಡೆಸಿ ಪ್ರಸ್ತಾವಿಕವಾಗಿ ಮಾತನಾಡಿದರು. ಹಿಂದೆಯೂ ಸಮಿತಿ ಇತ್ತು. ಆದರೆ ಪ್ರಾಧಿಕಾರ ರಚನೆಯಿಂದಾಗಿ ಅಭಿವೃದ್ಧಿಗೆ ಹೆಚ್ಚಿನ ಅಧಿಕಾರ ಮತ್ತು ಅವಕಾಶ ಒದಗಿದಂತಾಗಿದೆ ಎಂದರು. ಇಲ್ಲಿಗೆ ಬರುವ ಭಕ್ತರಿಗೆ ಹೆಚ್ಚಿನ ಮತ್ತು ಉನ್ನತ ಮಟ್ಟದ ಆರೋಗ್ಯಕರ ಸವಲತ್ತು ಹಾಗೂ ಸೌಲಭ್ಯಗಳನ್ನು ಒದಗಿಸುವುದು ನಮ ಗುರಿಯಾಗಿದೆ ಎಂದರು. ಶ್ರೀ ಕ್ಷೇತ್ರ ಹಾಗೂ ದೇವಸ್ಥಾನದ ಸಂಪ್ರದಾಯ ಮತ್ತು ಚರಿತ್ರೆ, ಘನತೆಯನ್ನು ಕಾಪಾಡುವ ಜೊತೆಗೆ ಉನ್ನತೀಕರಿಸಬೇಕು ಎಂದರು.

ಪ್ರಾಧಿಕಾರ ವ್ಯವಸ್ಥಿತವಾಗಿ ನಡೆಯಬೇಕು. ಕಾಲ ಕಾಲಕ್ಕೆ ಸಭೆಗಳು ನಡೆದು ಹೆಚ್ಚಿನ ಶ್ರಮ ಶುಚಿತ್ವಕ್ಕೆ ಹಾಕಬೇಕು. ಕಸವನ್ನು ಆಗಿಂದಾಗ್ಗೆತೆರವುಗೊಳಿಸಬೇಕು. ವಾಹನಗಳ ಸಂಖ್ಯೆಯೂ ಹೆಚ್ಚಾಗಿದೆ. ವಾಹನ ನಿಲುಗಡೆಗೆ ಇನ್ನಷ್ಟು ಸುಸಜ್ಜಿತ ವ್ಯವಸ್ಥೆ ಕಲ್ಪಿಸಬೇಕಿದೆ. ಶ್ರೀ ಕ್ಷೇತ್ರದ ಅಭಿವೃದ್ಧಿಗೆ ಹಣಕ್ಕೆ ತೊಂದರೆ ಇಲ್ಲ. ಕೇಳಿದಷ್ಟು ಹಣವನ್ನು ಕೇಳಿದಾಗಲೆಲ್ಲಾ ಒದಗಿಸಲಾಗುತ್ತಿದ್ದರೂ ಕೆಲಸಗಳು ಮಾತ್ರ ನಿರೀಕ್ಷಿತ ವೇಗದಲ್ಲಿ ನಡೆಯುತ್ತಿಲ್ಲ. ಇದನ್ನು ನಾನು ಸಹಿಸುವುದಿಲ್ಲ. ಸಮಯಕ್ಕೆ ಸರಿಯಾಗಿ ಕೆಲಸ ಮಾಡದಿದ್ದರೆ ನಾನು ಮುಲಾಜಿಲ್ಲದೆ ಕ್ರಮ ತೆಗೆದುಕೊಳ್ಳುತ್ತೇನೆ ಎಂದು ಎಚ್ಚರಿಸಿದರು. ತಾಯಿ, ಶಕ್ತಿ ದೇವತೆ



ಚಾಮುಂಡಿ ದೇವಿ ಬಗ್ಗೆ ಕೋಟ್ಯಂತರ ಮಂದಿಗೆ ಅಪಾರ ಭಕ್ತಿ, ಶ್ರದ್ಧೆ, ನಂಬಿಕೆ ಇದೆ. ದೇಶದ ಮೂಲೆ ಮೂಲೆಗಳಿಂದ ಭಕ್ತರು ಬರುತ್ತಾರೆ. ಇವರೆಲ್ಲರಿಗೂ ಅಗತ್ಯ ಸವಲತ್ತುಗಳನ್ನು ಒದಗಿಸಬೇಕು ಎಂದು ಸ್ಪಷ್ಟ ಸೂಚನೆ ನೀಡಿದರು. ತಾಯಿ ಸನ್ನಿಧಿಯಲ್ಲಿ ಗುಣಮಟ್ಟದ ವ್ಯವಸ್ಥೆ ಕಲ್ಪಿಸದಿದ್ದರೆ ಸಂಬಂಧಪಟ್ಟವರ ಮೇಲೆ ಸೂಕ್ತ ಕ್ರಮ ಕೈಗೊಳ್ಳುವುದು ಖಚಿತ ಎಂದು ಎಚ್ಚರಿಸಿದರು.ಕೊಪ್ಪಳ ಹುಲಿಗಮ ದೇವಸ್ಥಾನ ಮತ್ತು ಘಾಟಿ ಸುಬ್ರಮಣ್ಯ ದೇವಸ್ಥಾನಗಳ ಹೆಚ್ಚಿನ ಅಭಿವೃದ್ಧಿಗಾಗಿ ಪ್ರಾಧಿಕಾರ ರಚನೆ ಬಗ್ಗೆಯೂ ಹೆಚ್ಚಿನ ಬೇಡಿಕೆ ಇದೆ. ಈ ಬಗ್ಗೆಯೂ ಮುಂದುವರೆಯುವ ಅಗತ್ಯವಿದೆ ಎಂದರು.

ಜಿಲ್ಲಾ ಉಸ್ತುವಾರಿ ಸಚಿವ ಹೆಚ್.ಸಿ.ಮಹದೇವಪ್ಪ, ಪ್ರವಾಸೋದ್ಯಮ ಸಚಿವ ಎಚ್.ಕೆ.ಪಾಟೀಲ್, ಪಶು ಸಂಗೋಪನಾ ಸಚಿವ ಕೆ.ವೆಂಕಟೇಶ್, ಮುಜರಾಯಿ ಸಚಿವರಾದ ರಾಮಲಿಂಗಾರೆಡ್ಡಿ, ಶಾಸಕರಾದ ಯತೀಂದ್ರ ಸಿದ್ದರಾಮಯ್ಯ, ರವಿಶಂಕರ್, ಡಾ.ತಿಮಯ್ಯ, ಹರೀಶ್ ಗೌಡ, ಜಿ.ಟಿ.ದೇವೇಗೌಡ, ವಿವೇಕಾನಂದ ಸೇರಿ ಹಲವು ಗಣ್ಯರು ಉಪಸ್ಥಿತರಿದ್ದರು.

## ಹಾಲಿನ ಖರೀದಿ ದರದಲ್ಲಿ ಕಡಿತ

ಅಧಿಕಾರ ದರ್ಪದ ಅಮಲಿನಿಂದ ಕೊಬ್ಬಿರುವ ರಾಜ್ಯ ಸರ್ಕಾರ ಅನ್ನದಾತನ ಮೇಲೆ ಬರೆಯ ಬರೆ ಎಳೆಯುತ್ತಿದೆ. ರೈತನ ಜೀವನಾಧಾರವಾಗಿರುವ ಹಾಲಿನ ಮೇಲೆ ಕಾಂಗ್ರೆಸ್ ಆಡಳಿತದ ಕಾಕದೃಷ್ಟಿ ಬಿದ್ದಿದೆ. ಇದರ ಪರಿಣಾಮವಾಗಿ ಹಾಲಿನ ಖರೀದಿ ದರಕ್ಕೆ ಕತ್ತರಿ ಪ್ರಯೋಗವಾಗಿದೆ ಎಂದು ರಾಜ್ಯ ಸರ್ಕಾರದ ವಿರುದ್ಧ



ಕೇಂದ್ರ ಸಚಿವ ಹೆಚ್.ಡಿ.ಕುಮಾರ ಸ್ವಾಮಿ ಕಿಡಿ ಕಾರಿದ್ದಾರೆ. ಬಳ್ಳಾರಿ, ರಾಯಚೂರು, ಕೊಪ್ಪಳ, ವಿಜಯನಗರ ಹಾಲು ಒಕ್ಕೂಟಗಳು ಏಕಪಕ್ಷೀಯವಾಗಿ ಹಾಲಿನ ಖರೀದಿ ದರದಲ್ಲಿ ?1.50 ಕಡಿತ ಮಾಡಿವೆ. ಇದರಿಂದಾಗಿ ಕಾಮಧೇನುವನ್ನೇ ನಂಬಿದ್ದ ರೈತನ ಕರುಳಿಗೆ ಕೊಳ್ಳಿ ಬಿದ್ದಿದೆ ಎಂದು ಕುಮಾರಸ್ವಾಮಿ ಟ್ವೀಟ್ ಮಾಡಿ ಆಕ್ರೋಶ ಹೊರಹಾಕಿದ್ದಾರೆ. ನಮ್ಮದು ರೈತಪರ ಸರ್ಕಾರ ಎನ್ನುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು, ಇತ್ತ ಗಮನ ಹರಿಸಬೇಕು. ಅವರಿಗೆ ಅಷ್ಟು ಸಮಯ ಇದೆ ಎಂದು ನಾನಾದರೂ ಪರಿಭಾವಿಸುತ್ತೇನೆ ಎಂದು ಮಾರ್ಮಿಕವಾಗಿ ಸಿಎಂ ವಿರುದ್ಧ ಹೆಚ್.ಡಿ.ಕೆ ಕುಟುಕಿದ್ದಾರೆ.

## ತೋಳದ ಕಾಟ: ಕಂಡಲ್ಲಿ ಗುಂಡು ಆದೇಶ ಹೊರಡಿಸಿದ ಯೋಗಿ.!

ಉತ್ತರ ಪ್ರದೇಶದ ಬಹರೈಚ್ ಜಿಲ್ಲೆಯಲ್ಲಿನ ಮಹಸಿ ತಹಶೀಲ್??ನಲ್ಲಿ ತೋಳಗಳ ದಾಳಿ ಮುಂದುವರೆದಿದೆ. ತೋಳಗಳ ಹಾವಳಿಗೆ ಜನರು ಹೈರಾಣಾಗಿದ್ದು, ಇದೀಗ ನರಭಕ್ಷಕ ಪ್ರಾಣಿಗಳ ನಿಯಂತ್ರಣಕ್ಕೆ ಉತ್ತರ ಪ್ರದೇಶ ಸರ್ಕಾರ ಹೊಸ ತಂತ್ರ ಪ್ರಯೋಗಕ್ಕೆ ಮುಂದಾಗಿದೆ. ಮಾರ್ಚ್ 18 ರಿಂದ ಇಲ್ಲಿಯವರೆಗೆ ಒಟ್ಟು 10 ಜನ ಅದರಲ್ಲೂ ಹೆಚ್ಚಾಗಿ ಮಕ್ಕಳು ತೋಳಗಳ ದಾಳಿಯಲ್ಲಿ ಸಾವಿಗೀಡಾಗಿದ್ದಾರೆ. ಈ ಹಿನ್ನೆಲೆ ನರಭಕ್ಷಕ ತೋಳಗಳ ನಿಯಂತ್ರಣಕ್ಕೆ ಕಂಡಲ್ಲಿ ಗುಂಡಿಕ್ಕುವುದೇ ಕೊನೆಯ ಉಪಾಯ ಎಂದು ಸಿಎಂ ಯೋಗಿ ಆದಿತ್ಯನಾಥ್ ಹೇಳಿದ್ದಾರೆ.

ತೋಳಗಳ ದಾಳಿಯಲ್ಲಿ ಸತ್ತವರ ಪೈಕಿ ಒಂಬತ್ತು ಮಂದಿ ಎಂಟು ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು ಮತ್ತು ಒಬ್ಬರು 55 ವರ್ಷ ವಯಸ್ಸಿನ ಮಹಿಳೆ ಎಂದು ತಿಳಿದುಬಂದಿದ್ದು, ನರಭಕ್ಷಕ ಪ್ರಾಣಿಗೆ ಇನ್ನಷ್ಟು ಜನ ಬಲಿಯಾಗುವ ಮೊದಲು ಅದನ್ನು ನಿಯಂತ್ರಿಸಲು ಯೋಗಿ ಸರ್ಕಾರ ಪ್ಲಾನ್ ಮಾಡಿದೆ. ತೋಳ ದಾಳಿ ನಡೆದಿದ್ದು, ಐದು ವರ್ಷದ ಬಾಲಕಿ ಅಜ್ಜಿಯ ಪಕ್ಕದಲ್ಲಿ ತನ್ನ ಮನೆಯಲ್ಲಿ ಮಲಗಿದ್ದಾಗ ತೋಳ ಎಳೆದೊಯ್ದಿದೆ. ಬಾಲಕಿಯ ಮನೆಯವರು ಮತ್ತು ನೆರೆಹೊರೆಯವರ ಕ್ಷಿಪ್ರ ಕಾರ್ಯಾಚರಣೆಯಿಂದಾಗಿ ಆಕೆಯ ಪ್ರಾಣ ಉಳಿದಿದೆ. ಅದೇ ಹೊತ್ತಲ್ಲಿ ದಾಳಿ ಮಾಡಿದ ತೋಳ ತಪ್ಪಿಸಿಕೊಂಡಿದೆ. ಸದ್ಯ ದಾಳಿಗೆ ಕಾರಣವಾದ ನರಭಕ್ಷಕ ತೋಳಗಳನ್ನು ಪತ್ತೆ ಹಚ್ಚಲು ಉತ್ತರ ಪ್ರದೇಶ ಪೊಲೀಸರು ಮತ್ತು ಅರಣ್ಯ ಇಲಾಖೆ ಆಪರೇಷನ್ ಭೇಡಿಯಾ ಆರಂಭಿಸಿದೆ. ಈ ನಡುವೆ ತೋಳಗಳ ನಿಯಂತ್ರಣಕ್ಕೆ ಕಂಡಲ್ಲಿ ಗುಂಡು ಆದೇಶ ಹೊರಬಿದ್ದಿದ್ದು, ಜನ ಕೊಂಚ ಸಮಾಧಾನಗೊಂಡಿದ್ದಾರೆ.

## ಸಂಯಮದಿಂದ ವರ್ತಿಸಿಸುವಂತೆ ಪೊಲೀಸರಿಗೆ ಗೃಹಸಚಿವರ ತಾಕೀತು

ಬೆಂಗಳೂರು: ಅರ್ಜಿ ಕೊಡಲು ಅಥವಾ ದೂರು ದುಮಾನ ಹೇಳಿಕೊಳ್ಳಲು ಬರುವವರೊಂದಿಗೆ ಒರಟಾಗಿ ನಡೆದುಕೊಳ್ಳದಂತೆ ಗೃಹಸಚಿವ ಡಾ.ಜಿ.ಪರಮೇಶ್ವರ್ ಪೊಲೀಸ್ ಅಧಿಕಾರಿ ಗಳಿಗೆ ತಾಕೀತು ಮಾಡಿದರು. ಪರಮೇಶ್ವರ್ ಅವರ ನಿವಾಸದೆದುರು ಆಗಮಿಸಿದ ಪಿಎಸ್ಐ ಹುದ್ದೆಯ ಆಕಾಂಕ್ಷಿಗಳು ಹಾಗೂ ಪೊಲೀಸ್ ಪೇದೆ ಹುದ್ದೆ ನೇಮಕಾತಿಗೆ ವಯೋಮಿತಿ ಸಡಿಲಿಕೆಗೆ ಮನವಿ ಸಲ್ಲಿಸಲು ಆಗಮಿಸಿದವರನ್ನು ಕೆಲವು ಪೊಲೀಸ್ ಅಧಿಕಾರಿಗಳು ಬಲವಂತವಾಗಿ ವಶಕ್ಕೆ ಪಡೆದು



ಕರೆದೊಯ್ದರು. ಈ ವೇಳೆ ಕೆಲವರ ಮೇಲೆ ಹಲ್ಲೆ ನಡೆಸಿದ್ದೂ ಕಂಡುಬಂದಿತು.

ಈ ಕುರಿತು ಮಾಧ್ಯಮದವರು ಖಾರವಾಗ ಪ್ರಶ್ನಿಸಿದಾಗ ಗೃಹಸಚಿವರು ತಬ್ಬಿಬ್ಬಾದರು. ಯಾವುದೇ ಅರ್ಜಿಗಳನ್ನು ನೀಡಲು ಬಂದವರೊಂದಿಗೆ ನಾನೇ ಮಾತನಾಡುತ್ತೇನೆ, ಅರ್ಜಿಗಳನ್ನು ಪಡೆದುಕೊಂಡು ಸಮಯವಿದ್ದರೆ ಅದರ ಮೇಲೆ ಸೂಕ್ತ ನಿರ್ದೇಶನಗಳನ್ನು ಬರೆದು ರವಾನೆ ಮಾಡುತ್ತೇನೆ. ಸಮಯ ಇಲ್ಲದೇ ಇದ್ದರೆ ಅರ್ಜಿ ಪಡೆದು ನಂತರ ಪರಿಶೀಲಿಸಲಾಗುವುದು ಎಂದು ಹೇಳಿದರು. ಬೆಳಗಿನ ಪ್ರಕರಣ ನನ್ನ ಗಮನಕ್ಕೆ ಬಂದಿಲ್ಲ. ಇನ್ನು ಮುಂದೆ ಅರ್ಜಿಗಳನ್ನು ನೀಡಲು ಬಂದವರೊಂದಿಗೆ ಯಾರೂ ಅನುಚಿತವಾಗಿ ವರ್ತಿಸಬಾರದು ಎಂದು ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

## ಟಿಕೆಟ್ ದರ ಏರಿಕೆಗೆ ಮುಂದಾದ ವಾಯುವ್ಯ ಸಾರಿಗೆ..!

ಬೆಳಗಾವಿ : ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿಗಳಲ್ಲಿ ಒಂದಾದ ಶಕ್ತಿ ಯೋಜನೆಯಿಂದಾಗಿ ಸಾರಿಗೆ ಇಲಾಖೆಗೆ ಬಹಳಷ್ಟು ನಷ್ಟವಾಗಿದ್ದು, ಇದರ ಬೆನ್ನಲ್ಲೇ ವಾಯುವ್ಯ ಸಾರಿಗೆ ನಿಗಮ ಮಂಡಳಿ ಹೊಸ ನಿರ್ಧಾರವನ್ನು ಕೈಗೊಂಡಿದೆ..

ಈ ಬಗ್ಗೆ ಮಾತನಾಡಿದ ನಿಗಮದ ಅಧ್ಯಕ್ಷರಾದ ನಿತೀಶ್ ಕೆ ಅವರು, ಸಾರಿಗೆ ಇಲಾಖೆ ನಷ್ಟದಲ್ಲಿದೆ ಅದಕ್ಕೆ ಟಿಕೆಟ್ ದರ ಹೆಚ್ಚಳ ಮಾಡೋ ಬಗ್ಗೆ ಚರ್ಚೆ ಮಾಡ್ತಿವಿ, ಕಳೆದ ನಾಲ್ಕು ವರ್ಷದಿಂದ ಕೂಡ ಬಸ್ ಟಿಕೆಟ್ ದರ ಹೆಚ್ಚಳವಾಗಿಲ್ಲ ಎಂದರು.

ಇತ್ತೀಚೆಗೆ ಬಸ್ಸಿನ ಬಿಡಿ ಭಾಗಗಳು ಆಯಿಲ್, ಡೀಸೆಲ್ ಸೇರಿದಂತೆ ಎಲ್ಲಾ ವಸ್ತುಗಳ ಬೆಲೆ ಹೆಚ್ಚಳವಾಗಿದೆ. ಆಯಿಲ್ ಸೇರಿದಂತೆ ಹಲವು ಬಸ್ಸಿನ ಬಿಡಿ ಭಾಗಗಳ ಬೆಲೆ ಹೆಚ್ಚಳವಾಗಿದೆ. ಅದು ಅಲ್ಲದೇ ಹಳೆಯ ಬಸ್ ಗಳನ್ನು ಮಾರಾಟ ಮಾಡಿ ಹೊಸ 400 ಹೆಚ್ಚಿಗೆ ಬಸ್ ಗಳನ್ನು ಖರೀದಿಸಲಾಗಿದೆ.

ಹಾಗಾಗಿ ಒಂದು ಹಂತದ ಮಟ್ಟಿಗೆ ತರಲು ನಿರ್ಧರಿಸಿದ್ದೇವೆ. ಆದಷ್ಟು ಬೇಗ ಟಿಕೆಟ್ ಬೆಲೆ ಏರಿಕೆ ಬಗ್ಗೆ ಮಾಹಿತಿ ನೀಡುತ್ತೇವೆ ಎಂದು ವಾಯುವ್ಯ ಸಾರಿಗೆ ನಿಗಮ ಮಂಡಳಿಯ ಅಧ್ಯಕ್ಷರು ತಿಳಿಸಿದ್ದಾರೆ.

## ಪ್ರಾಣಿ ದಾಳಿಯಲ್ಲಿ ಮೃತಪಟ್ಟ ಅರಣ್ಯ ಸಿಬ್ಬಂದಿಗೆ ಸರ್ಕಾರದ ನೆರವು

ವಿಧಾನಸೌಧದಲ್ಲಿ ಅರಣ್ಯ ಇಲಾಖೆಯ ವತಿಯಿಂದ ಪ್ರಶಸ್ತಿ ಪ್ರಧಾನ ಕಾರ್ಯಕ್ರಮ ಆಯೋಜಿಸಲಾಗಿತ್ತು. ಅರಣ್ಯ ರಕ್ಷಣೆಗಾಗಿ ಹಗಲು ರಾತ್ರಿಯೆನ್ನದೇ ದುಡಿದ ಅಧಿಕಾರಿಗಳು, ಸಿಬ್ಬಂದಿಗಳು ಮತ್ತು ಕಾವಾಡಿಗರಿಗೆ ಈ ಸಮಾರಂಭದಲ್ಲಿ ಪದಕ ಪ್ರಧಾನ ಮಾಡಲಾಯ್ತು.

ಇದೇ ಸಂದರ್ಭದಲ್ಲಿ ಮಾತನಾಡಿದ ಅರಣ್ಯ ಸಚಿವ ಈಶ್ವರ್ ಖಂಡ್ರೆ, ಪ್ರಶಸ್ತಿ ಪಡೆದ ಎಲ್ಲರಿಗೂ ಅಭಿನಂದನೆ ಸಲ್ಲಿಸಿದ್ರು ಹಾಗೂ ಅರಣ್ಯ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಶ್ರಮವನ್ನು ಶ್ಲಾಘಿಸಿದ್ರು.

ಇದೆಷ್ಟೇ ಅಲ್ಲದೇ, ಹಲವು ಕಾರ್ಯಾಚರಣೆಯ ಸಂದರ್ಭದಲ್ಲಿ ಪ್ರಾಣಾಪಾಯ ಎದುರಿಸುವ ಸಿಬ್ಬಂದಿಗಳ ಕುಟುಂಬಕ್ಕೆ ಆಧಾರವಾಗುವ ವಿಶೇಷ ಯೋಜನೆಯನ್ನು ಘೋಷಣೆ ಮಾಡಿದ್ದಾರೆ.

ಅರಣ್ಯದಲ್ಲಿ ಕಾಡ್ಗಿಚ್ಚು ನಂದಿಸುವ ಕಾರ್ಯಾಚರಣೆಯಲ್ಲಿ ಸಿಬ್ಬಂದಿ ಮೃತಪಟ್ಟರೆ ಅಥವಾ ಯಾವುದಾದ್ರೂ ಕಾರ್ಯಾಚರಣೆಯಲ್ಲಿ ಕಾಡು ಪ್ರಾಣಿಗಳಿಂದ ದಾಳಿಗೆ ಒಳಗಾಗಿ ಸಿಬ್ಬಂದಿ ಮೃತ ಪಟ್ಟರೆ ಅಂಥ ಕುಟುಂಬಗಳಿಗೆ ಅರಣ್ಯ ಇಲಾಖೆ ವತಿಯಿಂದ 50 ಲಕ್ಷ ಪರಿಹಾರವನ್ನ ಘೋಷಣೆ ಮಾಡಿದ್ದಾರೆ. ಆ ಮೂಲಕ ಅರಣ್ಯ ಇಲಾಖೆಯ ಸಿಬ್ಬಂದಿಗಳ ಹಲವು ದಿನಗಳ ಬೇಡಿಕೆಗೆ ಸ್ಪಂದಿಸಿದ್ದಾರೆ.


ಜಗತ್ತಿನ ಯಾವುದೇ ಮೂಲೆಯಲ್ಲಿ ಕುಳಿತು ಮುಂಜಾನೆವಾರ್ತೆ ಓದಿ...

www.munjanevarthe.com

ಮುಂಜಾನೆ ವಾರ್ತೆ ಕನ್ನಡ ದಿನಪತ್ರಿಕೆ ಓದುಗುವುದು ಈಗ ಮತ್ತಷ್ಟು ಸುಲಭ

# ಅತ್ಯಾಚಾರಿಗಳಿಗೆ ಮರಣದಂಡನೆ




ಪಶ್ಚಿಮ ಬಂಗಾಳ : ಕೋಲ್ಕತಾ ಯುವ ವೈದ್ಯೆ ಮೇಲೆ ಅತ್ಯಾಚಾರ ಪ್ರಕರಣಕ್ಕೆ ಸಂಬಂಧಪಟ್ಟಂತೆ ದೇಶದಾದ್ಯಂತ ವ್ಯಾಪಕ ಆಕ್ರೋಶ ವ್ಯಕ್ತವಾಗುತ್ತಿರುವ ಬೆನ್ನಲ್ಲೇ ಪಶ್ಚಿಮ ಬಂಗಳ ಸರ್ಕಾರ ಹೊಸ ಮಸೂದೆಯನ್ನು ಅಂಗೀಕರಿಸಿದೆ. ಮಹಿಳೆಯರು ಮತ್ತು ಮಕ್ಕಳ ರಕ್ಷಣೆಯನ್ನು ಬಲಪಡಿಸುವ ಉದ್ದೇಶದಿಂದ ಪಶ್ಚಿಮ ಬಂಗಾಳ ಸರ್ಕಾರ ಇಂದು ವಿಧಾನಸಭೆಯಲ್ಲಿ ಅತ್ಯಾಚಾರ ವಿರೋಧಿ ಮಸೂದೆ 2024 ಅನ್ನು ಸರ್ವಾನುಮತದಿಂದ ಅಂಗೀಕರಿಸಲಾಗಿದೆ.

ಪಶ್ಚಿಮ ಬಂಗಾಳ ಅಸೆಂಬ್ಲಿಯು ಅತ್ಯಾಚಾರ–ವಿರೋಧಿ ಮಸೂದೆ – ಅಪರಾಜಿತಾ ಮಹಿಳೆ ಮತ್ತು ಮಕ್ಕಳ (ಪಶ್ಚಿಮ ಬಂಗಾಳದ ಅಪರಾಧ ಕಾನೂನುಗಳ ತಿದ್ದುಪಡಿ) ಮಸೂದೆ ಎಂದು ಅಧಿಕೃತವಾಗಿ ಅಂಗೀಕರಿಸಲಾಗಿದ್ದು, ಈ ಶಾಸನವನ್ನು ರಾಜ್ಯ ಕಾನೂನು ಸಚಿವ ಮೊಲೊಯ್ ಘಟಕ್ ಅವರು ಮಂಡಿಸಿದರು.

ಸೆಪ್ಟೆಂಬರ್ 5 ರಿಂದ ಜಾರಿಗೆ ಬರಲಿರುವ ಈ ಮಸೂದೆಯು, ಅತ್ಯಾಚಾರದ ಅಪರಾಧಿಗಳು ಸಂತ್ರಸ್ತೆಯ ಸಾವಿಗೆ ಕಾರಣವಾದರೆ

ಅಥವಾ ಅವಳನ್ನು ಪ್ರಜ್ಞಾಹೀನ ಸ್ಥಿತಿಯಲ್ಲಿ ಬಿಟ್ಟರೆ ಅಂತಹ ಅಪರಾಧಿಗಳಿಗೆ ಮರಣದಂಡನೆ ವಿಧಿಸಲಾಗುವುದು.

2024ರ ಅತ್ಯಾಚಾರ ವಿರೋಧಿ ಮಸೂದೆಯು ರಾಜ್ಯದಲ್ಲಿ ಹೆಚ್ಚುತ್ತಿರುವ ಲೈಂಗಿಕ ಹಿಂಸಾಚಾರ ಹೆಚ್ಚಾದ ಬೆನ್ನಲ್ಲೇ ಈ ಕಾಯಿದೆಯನ್ನು ಅಂಗೀಕರಿಸಿದ್ದು,

ಒಂದು ವೇಳೆ ಅತ್ಯಾಚಾರ ಪ್ರಕರಣಗಳಲ್ಲಿ ಅಪರಾಧ ಸಾಬೀತಾದರೆ 10 ದಿನಗಳ ಒಳಗೆ ಆರೋಪಿಯನ್ನು ಗಲ್ಲಿಗೇರಿಸಬೇಕೆಂದು ಮಸೂದೆ ಹೇಳುತ್ತದೆ.

# ಕುಣಿಗಲ್ ಶಾಸಕ ರಂಗನಾಥ್ ಆಯ್ಕೆ ಅಸಿಂಧು ಕೋರಿ ಸುಪ್ರೀಂಗೆ ಬಿಜೆಪಿ ಅರ್ಜಿ: ನೋಟಿಸ್ ಜಾರಿ





ನವದೆಹಲಿ: ತುಮಕೂರಿನ ಕುಣಿಗಲ್? ಕ್ಷೇತ್ರದ ಶಾಸಕ ಡಾ.ಎಚ್.ಡಿ.ರಂಗನಾಥ್ ಅವರು 2023 ರಲ್ಲಿ ನಡೆದ ಕರ್ನಾಟಕ ವಿಧಾನಸಭೆ ಚುನಾವಣೆಯಲ್ಲಿ ಅಕ್ರಮವಾಗಿ ಆಯ್ಕೆಯಾಗಿದ್ದಾರೆ ಎಂದು ಬಿಜೆಪಿಯ ಪರಾಜಿತ ಅಭ್ಯರ್ಥಿ ಡಿ.ಕೃಷ್ಣಕುಮಾರ್ ಅವರು ಆರೋಪಿಸಿ ಸುಪ್ರೀಂಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಈ ಸಂಬಂಧ ಪ್ರತಿಕ್ರಿಯಿಸಲು ಸೂಚಿಸಿ ಕಾಂಗ್ರೆಸ್ ಶಾಸಕರಿಗೆ ನ್ಯಾಯಾಲಯ ಮಂಗಳವಾರ ನೋಟಿಸ್ ಜಾರಿ ಮಾಡಿದೆ.

ಈ ಹಿಂದೆ ರಂಗನಾಥ್ ಅವರ ಆಯ್ಕೆಯನ್ನು ರದ್ದು ಮಾಡಬೇಕು ಎಂದು ಕೋರಿ ಬಿಜೆಪಿ ನಾಯಕ ಕೃಷ್ಣಕುಮಾರ್ ಅವರು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಇದನ್ನು ಕೋರ್ಟ್ ತಿರಸ್ಕರಿಸಿತ್ತು. ಇದರ ವಿರುದ್ಧ ಅವರು ಸುಪ್ರೀಂಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದಾರೆ. ಇಂದು ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಸೂರ್ಯಕಾಂತ್ ಮತ್ತು ಉಜ್ಜಲ್ ಭುಯಾನ್ ಅವರಿದ್ದ ಪೀಠ ಕಾಂಗ್ರೆಸ್ ಶಾಸಕರಿಗೆ ನೋಟಿಸ್ ರವಾನಿಸಿದೆ.

ಪರಾಜಿತ ಅಭ್ಯರ್ಥಿ ಮಾಡಿರುವ ಆರೋಪಗಳ ಬಗ್ಗೆ ಸೆಪ್ಟೆಂಬರ್ 23 ರೊಳಗೆ ಪ್ರತಿಕ್ರಿಯಿಸಿ. ಈ ಬಗ್ಗೆ ಯಾವುದಾದರೂ ತಕರಾರು ಮತ್ತು ದಾಖಲೆಗಳಿದ್ದರೆ ಕೋರ್ಟ್‌ಗೆ ಸಲ್ಲಿಸಿ ಎಂದು ನೋಟಿಸ್‌ನಲ್ಲಿ ಸೂಚಿಸಲಾಗಿದೆ. ಮುಂದಿನ ವಿಚಾರಣೆಯನ್ನು ಎರಡು ವಾರಗಳ ನಂತರ ನಡೆಸಲಾಗುವುದು ಎಂದು ಪೀಠ ಹೇಳಿದೆ.

ಅರ್ಜಿಯ ಆರೋಪವೇನು?: ಕುಣಿಗಲ್ ಶಾಸಕ ರಂಗನಾಥ್? ಅವರು ಚುನಾವಣೆಯ ವೇಳೆ ಅಕ್ರಮ ಎಸಗಿದ್ದಾರೆ. ಅಡುಗೆ ಸಾಮಾನು, ಡಿನ್ನರ್?? ಸೆಟ್?, ಪ್ರೀಪೇಯ್ಡ್?? ಕಾರ್ಡ್?ಗಳನ್ನು ನೀಡಿ ಮತದಾರರಿಗೆ ಆಮಿಷವೊಡ್ಡಿದ್ದಾರೆ ಎಂದು ಆರೋಪಿಸಿ, ಅವರ ಆಯ್ಕೆಯನ್ನು ರದ್ದು ಮಾಡಬೇಕು ಎಂದು ಬಿಜೆಪಿ ಪರಾಜಿತ ಅಭ್ಯರ್ಥಿ ಕೃಷ್ಣಕುಮಾರ್? ಅವರು ಮನವಿ ಮಾಡಿದ್ದಾರೆ. ಇದರ ಜೊತೆಗೆ ರಂಗನಾಥ್? ಅವರು ಚುನಾವಣಾ ಆಯೋಗಕ್ಕೆ ಸಲ್ಲಿಸಿದ ಅಫಿಡವಿಟ್??ನಲ್ಲಿ ತಮ್ಮ ಆಸ್ತಿ ಮತ್ತು ಹೊಣೆಗಾರಿಗೆ ಬಗ್ಗೆಯೂ ಸುಳ್ಳು ಹೇಳಿದ್ದರೆ ಎಂದು ಅರ್ಜಿಯಲ್ಲಿ ದೂರಲಾಗಿದೆ.

ಹೈಕೋರ್ಟ್ ನಿರಾಕರಿಸಿದ್ದೇಕೆ?: ಬಿಜೆಪಿಯ ಕೃಷ್ಣಕುಮಾರ್ ಅವರು ರಂಗನಾಥ್ ಅವರ ಶಾಸಕತ್ವ ರದ್ದು ಕೋರಿ ಹೈಕೋರ್ಟ್?ಗೆ ಅರ್ಜಿ ಸಲ್ಲಿಸಿದ್ದರು. ಇದನ್ನು ವಿಚಾರಣೆ ನಡೆಸಿದ್ದ ಕೋರ್ಟ್? ಅರ್ಜಿಯನ್ನು ಜೂನ್? 21 ರಂದು ತಿರಸ್ಕರಿಸಿತ್ತು. ಅರ್ಜಿದಾರರು ಮಾಡಿರುವ ಆರೋಪಗಳಲ್ಲಿ ವಾಸ್ತವಾಂಶಗಳ ಕೊರತೆ ಇದೆ. ಅಲ್ಲದೇ ವಿಚಾರಣೆಯ ವಿಷಯ ಅಥವಾ ಕ್ರಿಯೆಗೆ ನಿಖರ ಕಾರಣವಿಲ್ಲ. ಅರ್ಜಿದಾರರ ತಕರಾರುಗಳು ಮತ್ತು ಆರೋಪಗಳು ಊಹೆ ಇಲ್ಲವೇ, ಕಲ್ಪನೆಯನ್ನು ಆಧರಿಸಿವೆ. ಅವರ ಆಯ್ಕೆಯನ್ನು ಪ್ರಶ್ನಿಸಲು ಇಷ್ಟು ಸಾಲದು ಎಂದು ಅಭಿಪ್ರಾಯಪಟ್ಟಿತ್ತು.

# ಎನಿವೇರ್ ನೋಂದಣಿ ಯೋಜನೆಯ ಅನುಕೂಲಗಳೇನು?




ಬೆಂಗಳೂರು: ಇಷ್ಟು ದಿನ ಆಯಾ ತಾಲೂಕು ವ್ಯಾಪ್ತಿಯಲ್ಲಿರುವ ಉಪನೋಂದಣಾಧಿಕಾರಿ ಕಚೇರಿಗಳಲ್ಲೇ ದಸ್ತಾವೇಜುಗಳ ನೋಂದಣಿ ಮಾಡುವ ಪ್ರಕ್ರಿಯೆ ನಡೆಯುತಿತ್ತು. ಆದರೆ, ಈಗ ನೋಂದಣಿ ವ್ಯವಸ್ಥೆಯನ್ನು ಸುಧಾರಿಸುವ ಸಲುವಾಗಿ ಸರ್ಕಾರ 'ಎನಿವೇರ್ ನೋಂದಣಿ ಯೋಜನೆ ' ಜಾರಿಗೆ ತಂದಿದೆ.

ಇನ್ನು ಮುಂದೆ ಜಿಲ್ಲೆಯ ಯಾವುದೇ ಉಪ ನೋಂದಣಾಧಿಕಾರಿ ಕಚೇರಿಯಲ್ಲಿ ಆ ಜಿಲ್ಲೆ ವ್ಯಾಪ್ತಿಯ ಯಾವುದೇ ಸ್ಥಿರಾಸ್ತಿಗಳ ನೋಂದಣಿ ಮಾಡಿಸಿಕೊಳ್ಳಬಹುದಾಗಿದೆ. ಈಗಾಗಲೇ ಬೆಳಗಾವಿ ಹಾಗೂ ತುಮಕೂರು ಜಿಲ್ಲೆಗಳಲ್ಲಿ ಎನಿವೇರ್ ನೋಂದಣಿ ಯೋಜನೆ ಅನುಷ್ಠಾನಗೊಂಡಿದ್ದು, ಅದು ಯಶಸ್ವಿಯಾಗಿದೆ.

ಹಾಗಾಗಿ, ಸೆ.2 ರಿಂದ ಎಲ್ಲಾ ಜಿಲ್ಲೆಗಳಲ್ಲೂ ಉಪ ನೋಂದಣಾಧಿಕಾರಿ ಕಚೇರಿಯಲ್ಲಿ ನೋಂದಣಿ ಪ್ರಕ್ರಿಯೆ ನಡೆಸಲು ಅವಕಾಶ ಕಲ್ಪಿಸಲಾಗಿದೆ ಎಂದು ಕಂದಾಯ ಸಚಿವ ಕೃಷ್ಣಭೈರೇಗೌಡ ತಿಳಿಸಿದ್ದಾರೆ.

ರಾಜ್ಯದಲಿ 252 ಉಪ ನೋಂದಣಾಧಿಕಾರಿ (ಸಬ್ ರಿಜಿಸ್ಟ್ರಾರ್) ಕಚೇರಿಗಳಿದೆ. ಆದರೆ, ಈ ಪೈಕಿ 50 ಕಚೇರಿಗಳಲ್ಲಿ ಮಾತ್ರ ಸಿಬ್ಬಂದಿಗಳಿಗೆ ಹೆಚ್ಚು ಕೆಲಸದ ಒತ್ತಡ ಇದೆ.

ಹಾಗಾಗಿ, ಆ ಕಚೇರಿಗಳಿಗೆ ಬರುವ ಜನರಿಗೆ ಅನಾನುಕೂಲವಾಗುತ್ತಿದೆ. ಸಮಯಕ್ಕೆ ಸರಿಯಾಗಿ ಕೆಲಸ ಆಗಲ್ಲ, ಗಂಟೆಗಟ್ಟಲೆ ಕಾಯಬೇಕು. ಇದರ ಜೊತೆಗೆ ಮಧ್ಯವರ್ತಿಗಳ ಕಾಟ ಇದೆ ಎಂಬ ದೂರುಗಳು ಬಂದ ಕಾರಣದಿಂದ ಎನಿವೇರ್ ನೋಂದಣಿ ವ್ಯವಸ್ಥೆ ಜಾರಿಗೆ ಬಂದಿದೆ.

ಆಸ್ತಿ ನೋಂದಣಿಗೆ ಮುಂದಾಗುವ ವ್ಯಕ್ತಿ ತನ್ನ ಜಿಲ್ಲೆ ವ್ಯಾಪ್ತಿಯ, ತನಗೆ ಅನುಕೂಲವಾಗುವ ಹಾಗೂ ಜನ ಸಂದಣಿ ಇಲ್ಲದ ಯಾವುದೇ ಉಪ ನೋಂದಣಿ ಕಚೇರಿಗೆ ತೆರಳಿ ಆನ್‌ಲೈನ್ ಮೂಲಕ ಸಮಯ ಕಾಯ್ದಿರಿಸಿ ತನ್ನ ಆಸ್ತಿ ನೋಂದಣಿ ಮಾಡಿಕೊಳ್ಳಲು "ಎನಿವೇರ್ ಯೋಜನೆ" ಅಡಿಯಲ್ಲಿ ಅವಕಾಶ ಕಲ್ಪಿಸಲಾಗಿದೆ. ಎನಿವೇರ್ ನೋಂದಣಿಯನ್ನು ಇದೀಗ ಎಲ್ಲಾ ಜಿಲ್ಲೆಯಲ್ಲೂ ವಿಸ್ತರಿಸಲಾಗಿದೆ. ಇದರಿಂದ ಕಚೇರಿಯಲ್ಲಿ ಜನಜಂಗುಳಿ, ಸಿಬ್ಬಂದಿಗಳಿಗೆ ಕೆಲಸದ ಒತ್ತಡ ಕಡಿಮೆ ಮಾಡಿ ಸುಲಲಿತವಾಗಿ ಜನರಿಗೆ ನೋಂದಣಿ ಕೆಲಸ ಆಗಲು ಈ ಯೋಜನೆ ಸಹಕಾರಿಯಾಗಲಿದೆ.

ತಂತ್ರಜ್ಞಾನ ಬಳಸಿ ಜನಸ್ನೇಹಿ ಆಡಳಿತ : ಕಂದಾಯ ಇಲಾಖೆಯಲ್ಲಿ ಜನಸ್ನೇಹಿ ಆಡಳಿತ ನೀಡುವ ನಿಟ್ಟಿನಲ್ಲಿ ತಂತ್ರಜ್ಞಾನವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲಾಗುತ್ತಿದೆ. ಈ ಹಿಂದೆ ಆಸ್ತಿ ನೋಂದಣಿ ಅವಧಿಯನ್ನು ಕಡಿತಗೊಳಿಸಿ ಜನರ ಕೆಲಸಗಳಿಗೆ ವೇಗ ನೀಡುವ ನಿಟ್ಟಿನಲ್ಲಿ ಕಾವೇರಿ–2 ತಂತ್ರಜ್ಞಾನವನ್ನು ಜಾರಿಗೆ ತರಲಾಗಿತ್ತು.

ಇದೀಗ ಮತ್ತೊಮ್ಮೆ ಜನರಿಗೆ ಅನುಕೂಲವಾಗಲೆಂಬ ಉದ್ದೇಶದಿಂದ ಆರ್‌ಟಿಸಿಗೆ "ಆಧಾರ್ ಜೋಡಣೆ" ಹಾಗೂ "ಎನಿವೇರ್ ನೋಂದಣಿ" ವ್ಯವಸ್ಥೆಗೆ ಚಾಲನೆ ನೀಡಲಾಗಿದೆ.

ಇನ್ನು ಮುಂದೆ ಜಿಲ್ಲೆಯ ಯಾವುದೇ ಉಪನೋಂದಣಾಧಿಕಾರಿ ಕಚೇರಿಯಲ್ಲಿ ಆ ಜಿಲ್ಲೆ ವ್ಯಾಪ್ತಿಯ ಯಾವುದೇ ಸ್ಥಿರಾಸ್ತಿಗಳ ನೋಂದಣಿ ಪ್ರಕ್ರಿಯೆ ಮಾಡಬಹುದು. ಜೊತೆಗೆ ಈ ಸಂದರ್ಭದಲ್ಲಿ ಸಾರ್ವಜನಿಕರು ತಮ್ಮ ವೈಯಕ್ತಿಕ ಗುರುತಾಗಿ ಆಧಾರ್ ಅಥವಾ ಪಾನ್ ಕಾರ್ಡ್ ಅಥವಾ ಪಾಸ್‌ಪೋರ್ಟ್ ನೀಡುವುದು ಕಡ್ಡಾಯವಾಗಿರುತ್ತದೆ. ಈ ಯೋಜನೆ ರಾಜ್ಯಾದ್ಯಂತ ಸೆ. 2ರಿಂದ ಜಾರಿಗೆ ಬಂದಿದೆ.

ಆರ್‌ಟಿಸಿಗೆ ಆಧಾರ್ ಜೋಡಣೆ : ಅಕ್ರಮಗಳನ್ನು ತಪ್ಪಿಸುವ ಸಲುವಾಗಿಯೇ ಒಂದೆಡೆ ಆರ್‌ಟಿಸಿ (ಪಹಣಿ)ಗೆ ವಾರಸುದಾರರ ಆಧಾರ್ ಜೋಡಣೆ ಮಾಡಲಾಗುತ್ತಿದೆ.

ಇನ್ನೊಂದೆಡೆ ಯಾವುದೇ ಸ್ಥಿರಾಸ್ತಿಗಳ ನೋಂದಣಿ ಸಂದರ್ಭ ಸಾರ್ವಜನಿಕರು ತಮ್ಮ ವೈಯಕ್ತಿಕ ಗುರುತಾಗಿ ಆಧಾರ್ ಕಾರ್ಡ್/ಪಾನ್‌ಕಾರ್ಡ್ ಅಥವಾ ಪಾಸ್‌ಪೋರ್ಟ್ ಸಲ್ಲಿಸಬೇಕು ಎಂಬುದನ್ನು ಕಡ್ಡಾಯಗೊಳಿಸಲಾಗಿದೆ. 3 ತಾಲೂಕುಗಳಲ್ಲಿ ಪ್ರಯೋಗ ಯಶಸ್ವಿಯಾದ ನಂತರ ರಾಜ್ಯಾದ್ಯಂತ ವಿಸ್ತರಣೆ ಮಾಡಲಾಗುತ್ತಿದೆ.

ಜಮೀನಿನ ಮಾಲೀಕತ್ವದ ಸುರಕ್ಷೆ, ಭದ್ರತೆ ದೃಷ್ಟಿಯಿಂದ ಹಾಗೂ ವಂಚನೆ ತಪ್ಪಿಸುವ ಉದ್ದೇಶದಿಂದ ಆಧಾರ್ ವಿಲೀನಕ್ಕೆ ಜನರು ಒಪ್ಪಿ ಸಹಕರಿಸಬೇಕು. ಇದು ವ್ಯವಸ್ಥೆ ಮೇಲೆ ನಂಬಿಕೆ ತರುವ ಪ್ರಯತ್ನ. ಇದನ್ನು ಅನಾನುಕೂಲ ಎಂದು ಭಾವಿಸದೆ.

ಸಕಾರಾತ್ಮಕವಾಗಿ ಸ್ಪಂದಿಸಿ ಎಂದು ಅಧಿಕಾರಿಗಳು ಮನವಿ ಮಾಡಿದ್ದಾರೆ. ಯಾರಿಗೋ ಸೇರಿದ ಜಮೀನನ್ನು ಮತ್ಯಾರಿಗೋ ಪರಭಾರೆ ಮಾಡುವ ಬಗ್ಗೆ ಸಾಕಷ್ಟು ದೂರುಗಳು ಬರುತ್ತಿದ್ದು, ಇದನ್ನು ಸರಿಪಡಿಸುವ ಸಲುವಾಗಿ ಈ ಕ್ರಮ ಜಾರಿಗೊಳಿಸಲಾಗುತ್ತಿದೆ ಎಂದು ಸಚಿವ ಕೃಷ್ಣಬೈರೇಗೌಡ ಇತ್ತೀಚಿಗೆ ತಿಳಿಸಿದ್ದರು.

# ಕರ್ನಾಟಕ ಪ್ರಾಂತ ಕೃಷಿ ಕೂಲಿಕಾರರ ಸಂಘದ ಸದಸ್ಯರು ಬ್ಯಾಡರಹಳ್ಳಿ ಗ್ರಾಮ ಪಂಚಾಯತಿ ಎದುರು ಪ್ರತಿಭಟನೆ

ಮಹಾತ್ಮ ಗಾಂಧಿ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಕೂಲಿ ಕೆಲಸ ಮಾಡಿದ ಕೂಲಿಕಾರರಿಗೆ ಕಡಿಮೆ ಕೂಲಿ ಪಾವತಿ ಮಾಡಲಾಗಿದೆ ಎಂದು ಆರೋಪಿಸಿ ಬ್ಯಾಡರಹಳ್ಳಿ ಗ್ರಾಮಪಂಚಾಯಿತಿ ಎದುರು ಪ್ರತಿಭಟನೆ.

ಹಲಗೂರು: ಮಹಾತ್ಮ ಗಾಂಧಿ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಕೂಲಿ ಕೆಲಸ ಮಾಡಿದ ಕೂಲಿಕಾರರಿಗೆ ಕಡಿಮೆ ಕೂಲಿ ಪಾವತಿ ಮಾಡಲಾಗಿದೆ ಎಂದು ಆರೋಪಿಸಿ ಕರ್ನಾಟಕ ಪ್ರಾಂತ ಕೃಷಿ ಕೂಲಿಕಾರರ ಸಂಘದ ಸದಸ್ಯರು ಬ್ಯಾಡರಹಳ್ಳಿ ಗ್ರಾಮ ಪಂಚಾಯತಿ ಎದುರು ಪ್ರತಿಭಟನೆ ನಡೆಸಿದರು.



ಕೃಷಿ ಕೂಲಿಕಾರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಬಿ.ಎಂ.ಶಿವಮಲ್ಲಯ್ಯ ಮಾತನಾಡಿ ಉದ್ಯೋಗ ಖಾತರಿ ಕಾಯಿದೆಯು ಬಡಜನರ ಸಂಜೀವಿನಿ ಆಗಿದ್ದು, ಆರಂಭದ ದಿನಗಳಿಂದಲೂ ಕಡಿಮೆ ಕೂಲಿ ಪಾವತಿಸುವುದು, ಎನ್.ಎಂ.ಆರ್ ಶೂನ್ಯ ಮಾಡುವುದು ಹಲವಾರು ತೊಂದರೆಗಳನ್ನು ಎದುರಿಸುತ್ತಲೇ ಸಾಗಬೇಕಾದ ಪರಿಸ್ಥಿತಿ ಇದೆ. ಕಾಯ್ದೆಯನ್ನು ಸಮರ್ಪಕವಾಗಿ ಜಾರಿ ಮಾಡುವಲ್ಲಿ ಅಧಿಕಾರಿಗಳು ಸೋತಿದ್ದು, ಬಡಜನರು ತಮ್ಮ ದೈನಂದಿನ ಜೀವನ ನಿರ್ವಹಣೆ ಮಾಡಲು ಹೆಣಗಾಡುವಂತಾಗಿದೆ.

ಹಲಗೂರು ಹೋಬಳಿಯಲ್ಲಿ ಮಳೆ ಇಲ್ಲದ ಬರಗಾಲದಿಂದ ತತ್ತರಿಸಿರುವ ನೂರಾರು ಕುಟುಂಬಗಳಿಗೆ ಮಹಾತ್ಮ ಗಾಂಧಿ ಉದ್ಯೋಗ ಖಾತರಿ ಯೋಜನೆಯ ಕೆಲಸವೇ ಆಶ್ರಯ ನೀಡಿದೆ. ಆದರೆ ನರೇಗಾ ಇಂಜಿನಿಯರ್ ಅರುಣ್ ಕುಮಾರ್ ಮತ್ತು ಅಧಿಕಾರಿಗಳು ಇಲ್ಲ ಸಲ್ಲದ ಸಬೂಬು ಹೇಳಿ ದಿನಕ್ಕೆ ?260 ಮಾತ್ರ ಕೂಲಿ ಪಾವತಿಸಿರುವುದು ಖಂಡನೀಯ. ಕೂಡಲೇ ಎಲ್ಲಾ ಕೂಲಿಕಾರರಿಗೂ ಸರ್ಕಾರದ ನಿಯಮದಂತೆ ಕೂಲಿ ಪಾವತಿಸಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಘಟಕದ ಅಧ್ಯಕ್ಷ ಬಿ.ಎಂ.ಶಿವಮಲ್ಲಯ್ಯ, ಪ್ರಧಾನ ಕಾರ್ಯದರ್ಶಿ ಹನುಮೇಶ್, ಹಲಗೂರು ಹೋಬಳಿ ಘಟಕದ ಅಧ್ಯಕ್ಷೆ ಕುಂತೂರು ಲಕ್ಷ್ಮಿ, ಕಾರ್ಯದರ್ಶಿ ಗೊಲ್ಲರಹಳ್ಳಿ ಲಕ್ಷ್ಮಿ, ಮುಖಂಡರಾದ ರಾಮಣ್ಣ, ಕಾಯಕ ಬಂಧು ತೊಳಸಮ್ಮ, ರಾಜಮ್ಮ, ಮಹದೇವಮ್ಮ, ಮಂಜುಳ, ಗೋಪಿ, ಶಿವಕುಮಾರ್ ಸೇರಿದಂತೆ ಹಲವರು ಭಾಗವಹಿಸಿದ್ದರು.

# ವೇದಿಕೆಗಳನ್ನು ಮಕ್ಕಳು ಬಳಸಿಕೊಳ್ಳುವ ರೀತಿಯಲ್ಲಿ ಪ್ರತಿ ಪೋಷಕರೂ ಗಮನಹರಿಸಬೇಕು



ಸಾಗರ: ಸ್ಪರ್ಧಾತ್ಮಕ ಯುಗದ ಅಗತ್ಯ ಪೈಪೋಟಿಗೆ ಬೇಕಿರುವ ಆತ್ಮಸ್ಥೈರ್ಯ ನೀಡುವ ಶಾಲಾ ವೇದಿಕೆಗಳನ್ನು ಮಕ್ಕಳು ಬಳಸಿಕೊಳ್ಳುವ

ರೀತಿಯಲ್ಲಿ ಪ್ರತಿ ಪೋಷಕರೂ ಗಮನಹರಿಸಬೇಕು ಎಂದು ಎಡಜಿಗಳೆಮನೆ ಗ್ರಾಮ ಪಂಚಾಯಿತಿ ಅಧ್ಯಕ್ಷೆ ನಾಗವೇಣಿ ಪ್ರವೀಣ್ ಹೇಳಿದರು.

ತಾಲೂಕಿನ ಎಡಜಿಗಳೇಮನೆಯ ಇಕ್ಕೇರಿ ವಿದ್ಯಾಸಂಸ್ಥೆಯ ಸದ್ಗುರು ಸ್ಕೂಲ್ ಆಫ್ ವಿಷನ್‌ನ ಆಶ್ರಯದಲ್ಲಿ ಶಿಕ್ಷಣ ಇಲಾಖೆ ಮಂಗಳವಾರ ಏರ್ಪಡಿಸಿದ್ದ ಎಡಜಿಗಳೆಮನೆ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸೋಲು ಗೆಲುವು ವಿಷಯಕ್ಕಿಂತ ಸ್ಪರ್ಧೆಗಳಲ್ಲಿ ಭಾಗವಹಿಸುವ ಮೂಲಕ ಗಳಿಸಬಹುದಾದ ಅನುಭವವೇ ಮುಖ್ಯ ಎನ್ನುವುದನ್ನು ಎಂದೂ ಮರೆಯಬಾರದು. ಗೆಲುವು ಮಾತ್ರ ಸ್ಪರ್ಧೆಯ ಉದ್ದೇಶವಾಗಿರಬಾರದು. ಚಿಕ್ಕ ಮಕ್ಕಳು ವೇದಿಕೆಯಲ್ಲಿ ಯಾವ ಅಭಿನಯ ಮಾಡಿದರೂ ಅದು ಚೆಂದವೆ. ಅದನ್ನು ಎಲ್ಲರೂ ನೋಡಿ ಆನಂದಿಸಬೇಕು ಎಂದರು.

ವಿದ್ಯಾಸಂಸ್ಥೆಯ ಅಧ್ಯಕ್ಷ ಎಸ್.ಟಿ. ರತ್ನಾಕರ್ ಅಧ್ಯಕ್ಷತೆ ವಹಿಸಿದ್ದರು. ಇದೇ ವೇಳೆ ನಿರ್ಗಮಿತ ಸಿಆರ್‌ಪಿ ನಾಗರಾಜ್‌ರವರನ್ನು ಸನ್ಮಾನಿಸಲಾಯಿತು. ಬಿಆರ್‌ಪಿ ನಂದೀಶ್, ಶಿಕ್ಷಕರ ಸಂಘದ ಸಂಘಟನಾ ಕಾರ್ಯದರ್ಶಿ ಎಂ.ವೈ. ಮೂರ್ತಿ,

ಸತ್ಯನಾರಾಯಣ ಶಿರವಂತೆ, ಮಾತನಾಡಿದರು. ಬಿಆರ್‌ಪಿ ಮಲ್ಲಿಕಾರ್ಜುನ್, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಕಾರ್ಯದರ್ಶಿ ಕೆ. ಜಗನ್ನಾಥ್, ಸಿಆರ್‌ಪಿ ರವಿ, ಜೆ.ಆರ್. ವೆಂಕಟೇಶ್, ಮುಖ್ಯಶಿಕ್ಷಕ ರಜನೀಶ್, ಮೇಖಲಾ ಎಂ. ಭಟ್, ಶ್ರೀಕಾಂತ, ಅಂಬಿಕಾ, ಸೌಮ್ಯ ಮತ್ತು ಮಧುಶ್ರೀ ಇದ್ದರು.

# ಶಿಕ್ಷಣದೊಂದಿಗೆ ಸಂಸ್ಕಾರ ಕಲಿಸಿದ ಗುರುಗಳು, ಶಾಲೆಯಲ್ಲಿ ಪೋಷಕರಿಗೆ ಪಾದಪೂಜೆ ಸಲ್ಲಿಸಿದ ವಿದ್ಯಾರ್ಥಿಗಳು

ಬಾಗಲಕೋಟೆ : ಸರ್ಕಾರಿ ಶಾಲೆ ಎಂದರೆ ಸರಿಯಾಗಿ ಶಿಕ್ಷಣ ಸಿಗಲ್ಲ ಎಂಬ ಮಾತು ಕೇಳಿ ಬರುತ್ತವೆ. ಆದರೆ, ಇಲ್ಲೊಂದು ಶಾಲೆಯಲ್ಲಿ ಶಿಕ್ಷಣದ ಜೊತೆಗೆ ಸಂಸ್ಕಾರ ಬೆಳೆಸುವ ಮೂಲಕ ಗಮನ ಸೆಳೆದಿದೆ. ಇಂತಹ ಶಾಲೆ ಇರುವುದು ಜಿಲ್ಲೆಯ ಬಾದಾಮಿ ತಾಲೂಕಿನ ಕೆರಕಲಮಟ್ಟಿ ಗ್ರಾಮದಲ್ಲಿ.

ಕೆರಕಲಮಟ್ಟಿ ಗ್ರಾಮದ ಸರ್ಕಾರಿ ಶಾಲೆಯಲ್ಲಿ 1 ರಿಂದ 7ನೇ ತರಗತಿವರೆಗೆ ಒಟ್ಟು 242 ಮಕ್ಕಳು ಶಿಕ್ಷಣ ಪಡೆಯುತ್ತಿದ್ದಾರೆ. ಶಾಲೆಯ ಮುಖ್ಯ ಗುರುಗಳಾದ ರಾಜೇಶ್ ಮನಗೂಳಿ ಹಾಗೂ ಸಹ ಶಿಕ್ಷಕರು, ಶ್ರಾವಣದ ಕೊನೆ ಸೋಮವಾರದಂದು ಮಕ್ಕಳಿಂದ ತಂದೆ – ತಾಯಿಗಳ ಪಾದಪೂಜೆ ಮಾಡಿಸಿದ್ದಾರೆ. ಮಕ್ಕಳಿಗೆ ಆತ್ಮವಿಶ್ವಾಸದೊಂದಿಗೆ ಭರವಸೆ ಮೂಡಿಸುವ ಕಾರ್ಯ ಮಾಡಿದ್ದಾರೆ.

ಶಿಕ್ಷಕರ ವಿನೂತನ ಕಾರ್ಯಕ್ರಮಕ್ಕೆ ಗ್ರಾಮಸ್ಥರು ಸಹ ಸಾಥ್ ನೀಡಿದ್ದಾರೆ. ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವುದರ ಜೊತೆಗೆ ಅವರಲ್ಲಿ ಹೆಚ್ಚಿನ ಪ್ರಮಾಣದ ಓದಿನ ಆಸಕ್ತಿ ಬೆಳೆಸಲು ಈ ಶಾಲೆ ಮುಂದಾಗಿದೆ. ಎಲ್ಲ ಮಕ್ಕಳು ಪ್ರತಿನಿತ್ಯ ಶಾಲೆಗೆ ಬರಬೇಕು, ಪೋಷಕರು ಮಕ್ಕಳ ವಿದ್ಯಾಭ್ಯಾಸಕ್ಕೆ ಮೊದಲ ಆದ್ಯತೆ ನೀಡಬೇಕು. ಆ ಮೂಲಕ ಉತ್ತಮ ಫಲಿತಾಂಶ ಪಡೆಯಬೇಕು ಅನ್ನೋ ಹಂಬಲದಿಂದ ಶಿಕ್ಷಕರು ವಿಶೇಷ ಕಾರ್ಯಕ್ರಮ ಹಮ್ಮಿಕೊಂಡಿದ್ದರು.

ನೂರಾರು ಮಕ್ಕಳು ಸಾಮೂಹಿಕವಾಗಿ ತಮ್ಮ ತಮ್ಮ ತಂದೆ ತಾಯಿಯ ಪಾದಪೂಜೆ ಮಾಡಿ ಆಶೀರ್ವಾದ ಪಡೆದರು. ಪೋಷಕರ ಪಾದ ತೊಳೆದು, ವಿಭೂತಿ, ಕುಂಕುಮ ಅರ್ಪಿಸಿ ಹೂ ಇಟ್ಟು ಉದುಬತ್ತಿ ಬೆಳಗಿ ಪೂಜೆ ಮಾಡಿದರು.

ಇದಾದ ನಂತರ ಶಿಕ್ಷಕರು ಮಕ್ಕಳಿಗೆ ಪ್ರಮಾಣ ವಚನ ಬೋಧಿಸಿದರು. ಪವಿತ್ರ ದಿನವಾದ ಇಂದು, ನನ್ನ ಹೆತ್ತವರ ಪುಣ್ಯಪಾದಗಳನ್ನು ಮುಟ್ಟಿ ಪ್ರತಿಜ್ಞೆ ಮಾಡುವುದು ಏನೆಂದರೆ, 'ನಾನು ನನ್ನ ಶಿಕ್ಷಣವನ್ನು ಪೂರ್ಣಗೊಳಿಸುವವರೆಗೆ ಎಂದಿಗೂ ಶಾಲೆಗೆ ಗೈರು ಹಾಜರಾಗದೇ, ಶಾಲೆಯಲ್ಲಿ ಪೂಜ್ಯ ಗುರುಗಳಿಂದ ಪಡೆದ ಜ್ಞಾನವನ್ನು ನನ್ನ ಜೀವನದಲ್ಲಿ ಅಳವಡಿಸಿಕೊಂಡು, ಅವರು ಹೇಳಿದ ಮನೆಗೆಲಸ ಮತ್ತು ವಹಿಸಿದ ಜವಾಬ್ದಾರಿಗಳನ್ನು ಶಿರಸಾವಹಿಸಿ ಪಾಲಿಸಿ, ಸಮಾಜದಲ್ಲಿ ಉತ್ತಮ ನಾಗರಿಕನಾಗಲು ಮನಃಪೂರ್ವಕವಾಗಿ ಪ್ರಯತ್ನಿಸುತ್ತೇನೆ.

ನಾನು ಇನ್ನು ಮುಂದೆ ಜೀವನದಲ್ಲಿ ಎಂದಿಗೂ ದುರಾಭ್ಯಾಸಗಳನ್ನು ಮಾಡುವುದಿಲ್ಲ. ಸತ್ಯ, ಅಹಿಂಸೆಗಳನ್ನು ಪಾಲಿಸುತ್ತಾ ಸನ್ಮಾರ್ಗದಲ್ಲಿ ನಡೆಯುತ್ತ ಆದರ್ಶ ವಿದ್ಯಾರ್ಥಿಯಾಗುತ್ತೇನೆ. ವಿದ್ಯಾದಾನ ಮಾಡಿದ ಗುರುಗಳಿಗೆ, ಜನ್ಮ ನೀಡಿದ ಹೆತ್ತವರಿಗೆ ಕೀರ್ತಿ ತರುವ ಹಾಗೆ ಜೀವನವನ್ನು ರೂಪಿಸಿಕೊಳ್ಳುತ್ತೇನೆ. ಆ ಮೂಲಕ ನನ್ನ ಊರಿಗೆ, ನಾಡಿಗೆ ಹಾಗೂ ದೇಶಕ್ಕೆ ಹೆಸರು ತರಲು ನನ್ನ ಉಸಿರು ಇರುವವರೆಗೂ ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇನೆ ಎಂದು ಈ ಮೂಲಕ ದೃಢಸಂಕಲ್ಪ ಮಾಡುತ್ತಾ ಪ್ರತಿಜ್ಞೆ ಮಾಡುತ್ತೇನೆ' ಎಂದು ಪ್ರಮಾಣ ಮಾಡಿಸಿದರು.

ಶಿಕ್ಷಣಕ್ಕೆ ಯಾವುದೇ ಚ್ಯುತಿ ಬಾರದಂತೆ ನಡೆದುಕೊಳ್ಳುತ್ತೇವೆ: ಇದು ಮಕ್ಕಳಲ್ಲಿ ಭರವಸೆಯನ್ನ ಮೂಡಿಸೋದು ಮೊದಲ ಭಾಗವಾದ್ರೆ, ಇನ್ನುಳಿದಂತೆ ಪಾಲಕರು ಮಕ್ಕಳನ್ನ ಉತ್ತಮವಾಗಿ ಓದಿಸುವ ಕುರಿತು ಪೋಷಕರಿಂದ ಪ್ರಮಾಣ ಮಾಡಿಸಿ ದೀಕ್ಷೆ ಕೊಡಿಸಿದರು. ಈ ವೇಳೆ, ಎಲ್ಲ ಪೋಷಕರು ಪವಿತ್ರ ದಿನವಾದ ಇಂದು ನಮ್ಮ ಮಗುವಿನ, ಮಕ್ಕಳ ತಲೆಯ ಮೇಲೆ ಕೈ ಇಟ್ಟು ಪ್ರಮಾಣ ಮಾಡುವ ಮೂಲಕ ದೀಕ್ಷೆ ಕೈಗೊಳ್ಳುವುದು ಏನೆಂದರೆ, 'ನಮ್ಮ ಮಗುವಿಗೆ, ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ಕೊಡಿಸುವುದನ್ನು ನಮ್ಮ ಪ್ರಥಮ ಆದ್ಯತೆಯೆಂದು ಭಾವಿಸಿ ಕಾಯಾ, ವಾಚಾ, ಮನಸಾ ಪ್ರಯತ್ನಿಸುತ್ತೇವೆ.

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಬುಧವಾರ 04 ಸೆಪ್ಟೆಂಬರ್ 2024
WEDNESDAY 04 September 2024

# ಉಪವಿಭಾಗಾಧಿಕಾರಿಗಳ ಕಛೇರಿ ಸ್ವಚ್ಚತೆ ಮಾಡಿ

ಸಕಲೇಶಪುರ: ಹಾಳು ಕೊಂಪೆಯಾಗಿರುವ ಉಪ ವಿಭಾಗಾಧಿಕಾರಿಗಳ ಕಛೇರಿ ಕಂಡು ನಾಗರೀಕರು ಬೇಸರ ವ್ಯಕ್ತಪಡಿಸಿದ್ದಾರೆ.

ಸಕಲೇಶಪುರ ಉಪವಿಭಾಗಾಧಿಕಾರಿಗಳ ಕಛೇರಿ ಮೇಲೆ ಗಿಡ ಗಂಟಿಗಳು ಬೆಳೆದು ಪಾಳುಬಿದ್ದ ಬಂಗಲೆಯಂತೆ ಕಾಣುತ್ತಿದೆ. ಸರ್ಕಾರ ಕಛೇರಿ ನಿರ್ವಹಣೆ ಮಾಡಲು ಸುಮಾರು 20 ರಿಂದ 30ಸಾವಿರ ಮಾಸಿಕ ನಿರ್ವಹಣೆ ಭತ್ಯೆ ಕೊಡುತ್ತಿದ್ದರೂ ಅಧಿಕಾರಿಗಳು ಕಣ್ಣು ಮುಚ್ಚಿ ಕುಳಿತಿದ್ದಾರೆ ಎಂದು ನಾಗರೀಕರು ಆರೋಪಿಸಿದ್ದಾರೆ.

ಸಕಲೇಶಪುರ ಉಪ ವಿಭಾಗಾಧಿಕಾರಿಗಳ ಕಛೇರಿ ಹೊಸದಾಗಿ ಆಯ್ಕೆಯಾಗಿರುವ. ಐಎಎಸ್ ನವರಿಗೆ ತರಬೇತಿ ನೀಡುವ ಕಛೇರಿಯಾಗಿದ್ದು. ಪಾಳುಬಿದ್ದ ಬಂಗಲೆಯಾಗಿದೆ. ಈ



ಕಛೇರಿಯನ್ನು ಈಗ್ಗೆ ಮೂರು ನಾಲ್ಕು ತಿಂಗಳ ಹಿಂದೆ ಕೋರ್ಟ್9 ಆದೇಶದಂತೆ ಜಪ್ತಿ ಮಾಡಿ ಪೀಠೋಪಕರಣಗಳು . ವಾಹನ ತೆಗೆದುಕೊಂಡು ಹೋಗಿದ್ದು. ನಾಗರೀಕರ ಹುಬ್ಬೇರುವಂತೆ ಆಗಿ ಆಶ್ಚರ್ಯ ವ್ಯಕ್ತಪಡಿಸಿದ್ದು ಸುಳ್ಳಲ್ಲ. ಕೂಡಲೆ ಸಕಲೇಶಪುರ ಉಪವಿಭಾಗಾಧಿಕಾರಿಗಳು ಗಮನ ಹರಿಸಿ ಕಛೇರಿಯನ್ನು ಸ್ವಚ್ಛಗೊಳಿಸಿ ಇಲ್ಲದಿದ್ದಲ್ಲಿ ನಾವೇ ಸ್ವಚ್ಚತಾ ಕಾರ್ಯ ಮಾಡಬೇಕಾಗುತ್ತದೆ ಎಂದು ನಾಗರೀಕರು ಎಚ್ಚರಿಕೆ ನೀಡಿದ್ದಾರೆ

# ನೂತನ ಅಧ್ಯಕ್ಷರಾಗಿ ಕಾಂಗ್ರೆಸ್ ಪಕ್ಷದ ರಾಜೇಶ್ವರಿ ರಾಘವೇಂದ್ರ ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆ




ತಿ.ನರಸೀಪುರ:–ತಿ.ನರಸೀಪುರ ಪುರಸಭೆಗೆ ಕಾಂಗ್ರೆಸ್ ಬೆಂಬಲಿತ ಪಕ್ಷೇತರ ಅಭ್ಯರ್ಥಿ ಬಿ.ವಸಂತ ಶ್ರೀಕಂಠ ನೂತನ ಅಧ್ಯಕ್ಷರಾಗಿ ಕಾಂಗ್ರೆಸ್ ಪಕ್ಷದ ರಾಜೇಶ್ವರಿ ರಾಘವೇಂದ್ರ ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದರು. ಪಟ್ಟಣ ಪುರಸಭೆಗೆ ಎರಡನೇ ಅವದಿಗೆ ನೆಡದ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಮೀಸಲಾಗಿದ್ದ ಪ್ರವರ್ಗ 2 ಎ ಮಹಿಳಾ ಮೀಸಲು ಅಡಿಯಲ್ಲಿ ಪಕ್ಷೇತರ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಯಾಗಿ ಬಿ.ವಸಂತ ಶ್ರೀಕಂಠ ಹಾಗೂ ಪರಿಶಿಷ್ಟ ಪಂಗಡ ಮಹಿಳೆಗೆ ಮೀಸಲಾಗಿದ್ದ ಉಪಾಧ್ಯಕ್ಷ ಸ್ಥಾನಕ್ಕೆ ಕಾಂಗ್ರೆಸ್ ನ ರಾಜೇಶ್ವರಿ ರಾಘವೇಂದ್ರ ನಾಮಪತ್ರ ಸಲ್ಲಿಸಿ ಅವಿರೋಧವಾಗಿ ಆಯ್ಕೆಯಾದರು.

*ಚುನಾವಣೆ ಪ್ರಕ್ರಿಯೆಯನ್ನು ತಾಲ್ಲೂಕು ದಂಡಾಧಿಕಾರಿ ಸುರೇಶಾಚಾರ್ ನೆಡಸಿದರು ಪುರಸಭೆ ಮುಖ್ಯಾಧಿಕಾರಿ ಬಿ.ಕೆ.ವಸಂತ ಕುಮಾರಿ ತಹಶೀಲ್ದಾರ್‌ರವರಿಗೆ ನೆರವಾದರು.*

*ಈ ವೇಳೆ ಮಾಜಿ ಅಧ್ಯಕ್ಷರಾದ ಟಿ.ಎಂ.ನಂಜುಂಡಸ್ವಾಮಿ, ಎನ್.ಸೋಮಣ್ಣ, ಸದಸ್ಯರಾದ ಪ್ರೇಮ ಮರಯ್ಯ, ಮೆಡಿಕಲ್ ನಾಗರಾಜು, ಎಲ್. ಮಂಜುನಾಥ್, ಸಿಸ್ಟಮ್ ಎಂ. ಸಿದ್ದು, ಅಹಮದ್ ಸಯ್ಯದ್, ಬೇಬಿ ಹೇಮಂತ್, ನಾಗರತ್ನ, ಮಹಾದೇವಮ್ಮ, ಆರ್.ಅರ್ಜುನ್, ರೂಪ ಪರಮೇಶ್,ಕೆ. ಕಿರಣ್, ತೇಜಸ್ವಿನಿ, ಶೋಭರಾಣಿ. ಪಿ ಮಂಜು(ಬಾದಾಮಿ), ಮೋಹನ, ಮುಖಂಡರಾದ ಮಾಜಿ ಜಿಪಂ ಸದಸ್ಯ ಕೆ.ಮಹದೇವು, ತಾ.ಪಂ. ಮಾಜಿ ಸ್ಥಾಯಿ ಸಮಿತಿ ಅಧ್ಯಕ್ಷ ರಮೇಶ್, ಶ್ರೀಕಂಠ, ರಾಘವೇಂದ್ರ, ಸಿ. ಮಹದೇವ, ಉಮೇಶ್ (ಕನಕ ಪಾಪು ), ಮನ್ನೆಹುಂಡಿ ಮಹೇಶ, ಗಣೇಶ್, ಮಿಥುನ್, ಅಮ್ಜದ್ ಖಾನ್, ಶಿವಮಲ್ಲು, ಬಿ.ಎಂ. ದಿವಾಕರ್, ಅರುಣ್,ಮಾದೇಶ್, ಕಾಂತ, ಲಿಂಗರಾಜು (ಅಮಾಸ್ಯ ಗೌಡ) ಕುಮಾರ್, ಮೆಡಿಕಲ್ ಪ್ರಕಾಶ್, ವೆಂಕಟೇಶ್, ಮುಂತಾದವರು ಹಾಜರಿದ್ದರು.*

ಪುರಸಭೆ ವ್ಯಾಪ್ತಿಯಲ್ಲಿ ಕುಡಿಯುವ ನೀರು ,ರಸ್ತೆ ಮತ್ತು ವಿದ್ಯುತ್ ಸರಬರಾಜಿಗೆ ಮೊದಲ ಆದ್ಯತೆ ನೀಡಲಾಗುವುದು. ಸಾರ್ವಜನಿಕರು ಕಚೇರಿಗೆ ಅಲೆಯುವುದನ್ನು ತಪ್ಪಿಸಲು ಇ ಸ್ವತ್ತು ಅಭಿಯಾನ, ಕಂದಾಯ ಅಭಿಯಾನ, ಉದ್ಯಮ ನೋಂದಣಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು.
– ಬಿ.ವಸಂತಶ್ರೀಕಂಠ ನೂತನ ಅಧ್ಯಕ್ಷೆ ಪುರಸಭೆ ತಿ.ನರಸೀಪುರ.

ಒಟ್ಟು 23 ಸ್ಥಾನಗಳನ್ನು ಹೊಂದಿರುವ ಪುರಸಭೆಯಲ್ಲಿ ಕಾಂಗ್ರೆಸ್ 10, ಬಿಜೆಪಿ 4, ಜೆಡಿಎಸ್ 3 ಮತ್ತು ಪಕ್ಷೇತರ 6 ಸ್ಥಾನಗಳನ್ನು ಹೊಂದಿದೆ. ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಕ್ಕಾಗಿ ಕಾಂಗ್ರೆಸ್ ಪಕ್ಷದಲ್ಲೇ ಎರಡು ಗುಂಪುಗಳಾಗಿದ್ದು,ಒಂದು ಗುಂಪು 10ನೇ ವಾರ್ಡ್ ನ ಕಾಂಗ್ರೆಸ್ ಸದಸ್ಯೆ ಮಹಾದೇವಮ್ಮ ಅವರನ್ನು ಬೆಂಬಲಿಸಿದರೆ, ಮತ್ತೊಂದು ಗುಂಪು 12ನೇ ವಾರ್ಡ್ ನ ಪಕ್ಷೇತರ ಅಭ್ಯರ್ಥಿ ವಸಂತಶ್ರೀಕಂಠ ಅವರನ್ನು ಬೆಂಬಲಿಸಿತ್ತು. ಇದರಿಂದ ಅಧ್ಯಕ್ಷರ ಆಯ್ಕೆ ಕಾಂಗ್ರೆಸ್ ವರಿಷ್ಟರಿಗೆ ಕಗ್ಗಂಟಾಗಿತ್ತು. ಕೊನೆ ಘಳಿಗೆಯಲ್ಲಿ ನಡೆದ ಒಪ್ಪಂದ ಮೇರೆಗೆ ಪಕ್ಷೇತರ ಸದಸ್ಯೆ ವಸಂತಶ್ರೀಕಂಠ ಅವರನ್ನ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಯಿತು.

ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗೆ ಸೆಡ್ಡು ಹೊಡೆದಿದ್ದ ಬಿ.ವಸಂತ:– ಪುರಸಭೆ

ಚುನಾವಣೆ ವೇಳೆ ಕಾಂಗ್ರೆಸ್ ಪಕ್ಷದ ಟಿಕೆಟ್ ವಂಚಿತರಾಗಿದ್ದ ಬಿ.ವಸಂತ ಶ್ರೀಕಂಠ ಕಾಂಗ್ರೆಸ್ ಅಭ್ಯರ್ಥಿ ವಿರುದ್ದ ಬಂಡಾಯವೆದ್ದು ಪಕ್ಷೇತರವಾಗಿ ಸ್ಪರ್ಧೆ ಮಾಡಿ ವಿಜಯ ಸಾಧಿಸಿದ್ದರು ಈಗಲೂ ಸಹ ಕಾಂಗ್ರೆಸ್ ಸದಸ್ಯ ವಿರುದ್ದ ಅಧ್ಯಕ್ಷ ಸ್ಥಾನ ಪಡೆಯುವಲ್ಲಿ ಯಶಸ್ಸು ಕಂಡಿದ್ದಾರೆ.

ಅಧ್ಯಕ್ಷ ಪಟ್ಟಕ್ಕೇರಲು ಮುಖ್ಯ ಮಂತ್ರಿಗಳ ಕೃಪ ಕಟಾಕ್ಷ :–ಪಕ್ಷೇತರ ಅಭ್ಯರ್ಥಿಯಾಗಿ ಪುರಸಭೆ ಸದಸ್ಯೆಯಾಗಿ ಆಯ್ಕೆಯಾದ ನಂತರ ಕಾಂಗ್ರೆಸ್ ಪಕ್ಷದ ಜೊತೆ ಗುರಿತಿಸಿ ಕೊಂಡಿದ್ದ ಬಿ.ವಸಂತ ಶ್ರೀಕಂಠ ರವರಿಗೆ ಮುಖ್ಯಮಂತ್ರಿಗಳು ಆಶೀರ್ವಾದ ಮಾಡಿದ ಕಾರಣ ಅಧ್ಯಕ್ಷ ಪಟ್ಟ ಲಭಿಸಿತು ಎಂಬುದು ಸದಸ್ಯರಲ್ಲಿನ ಮಾತಾಗಿದೆ.

ಅಸಮಾಧಾನ ಬೂದಿ ಮುಚ್ಚಿದ ಕೆಂಡದಂತಿದೆ :–ಕಾಂಗ್ರೆಸ್ 10 ಸ್ಥಾನ ಪಡೆದಿದ್ದು, 6 ಪಕ್ಷೇತರರೂ 3 ಜೆಡಿಎಸ್ ಸದಸ್ಯರು ಸಹ ಕಾಂಗ್ರೆಸ್ ಜೊತೆಯಲ್ಲಿ ಇರುವುದರಿಂದ ಕಾಂಗ್ರೆಸ್ ಪಕ್ಷ ಸುಲಭವಾಗಿ ಅಧ್ಯಕ್ಷ ಪಟ್ಟವನ್ನು ಹಿಡಿಯಬಹುದಿತ್ತು ಇಷ್ಟೆಲ್ಲ ಅವಕಾಶ ಇದ್ದರೂ ಕಾಂಗ್ರೆಸ್ ಪಕ್ಷ ಪಕ್ಷೇತರ ಸದಸ್ಯೆಯನ್ನು ಅಧ್ಯಕ್ಷೆಯನ್ನಾಗಿ ಮಾಡಿರುವುದು ಎಲ್ಲರನ್ನು ಹುಬ್ಬೇರುವಂತೆ ಮಾಡಿದೆ. ಕಾಂಗ್ರೆಸ್ ನಲ್ಲಿ ಗೆದ್ದು ಅವಕಾಶ ವಂಚಿತರಾದ ಸದಸ್ಯರಲ್ಲಿ ನೈಜವಾಗಿ ನಿರಾಸೆ ಮೂಡಿದ್ದು, ಅದು ಸಕಾಲದಲ್ಲಿ ತಣ್ಣಗಿದ್ದರೂ ಭವಿಷ್ಯದಲ್ಲಿ ಸ್ಫೋಟಿಸಬಹುದು.

# ಒತ್ತುವರಿ ತೆರವು, ಸರ್ವೇ ಕಾರ್ಯದ ಕುರಿತು ಹಲವು ಭಿನ್ನ ಸಲಹೆಗಳಿವೆ

ಸಾಗರ ವಾಯುವಿಹಾರಿಗಳಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಗಣಪತಿ ಕೆರೆ ಎರಡೂ ಬದಿ ಇಂಟರ್ ಲಾಕ್ ಹಾಕುವುದು, ಗಿಡ ನೆಡುವ ಉದ್ದೇಶ ಹೊಂದಿದ್ದೇವೆ. ಒತ್ತುವರಿ ತೆರವು, ಸರ್ವೇ ಕಾರ್ಯದ ಕುರಿತು ಹಲವು ಭಿನ್ನ ಸಲಹೆಗಳಿವೆ. ಸದ್ಯ ಅಭಿವೃದ್ಧಿಗೆ ಮಾತ್ರ

ಹಬ್ಬದ ವೇಳೆಯಲ್ಲಿ ಗಣಪತಿ ವಿಸರ್ಜನೆ ಯಾವುದೇ ತೊಂದರೆಯಾಗದಂತೆ ವಿದ್ಯುದ್ದೀಪ, ಕೆರೆ ಆವರಣದಲ್ಲಿ ನೆಲ ಹಾಸು ಅಳವಡಿಸಲಾಗುತ್ತದೆ. ವಿಸರ್ಜನೆ ಸಂದರ್ಭದಲ್ಲಿ ಹೆಚ್ಚಿನ ರಕ್ಷಣಾ ವ್ಯವಸ್ಥೆ ಕಲ್ಪಿಸುವಂತೆ ಅಧಿಕಾರಿಗಳಿಗೆ



ಆದ್ಯತೆ ಎಂದು ಗೋಪಾಲಕೃಷ್ಣ ಬೇಳೂರು ತಿಳಿಸಿದರು.

ನಗರಸಭೆ ವತಿಯಿಂದ ಎಸ್‌ಎಫ್‌ಸಿ ವಿಶೇಷ ಅನುದಾನದಲ್ಲಿ ಗಣಪತಿ ಕೆರೆ ಮೇಲಿನ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಮಂಗಳವಾರ ಚಾಲನೆ ನೀಡಿ ಮಾತನಾಡಿದ ಅವರು, ಕೆರೆ ಒತ್ತುವರಿ ತೆರವಿನ ಬಗ್ಗೆ ಹಲವು ಚರ್ಚೆಯಿದೆ. ಮೊದಲಿನ ಅಭಿವೃದ್ಧಿ ಕಾಮಗಾರಿಗಳಿಗೂ ಆಕ್ಷೇಪಗಳಿರುವುದರಿಂದ ನಗರಸಭೆಯಲ್ಲಿರುವ 70 ಲಕ್ಷ ರೂ. ಹಣವನ್ನು ತಡೆ ಹಿಡಿಯಲಾಗಿದೆ. ಪ್ರಸ್ತುತ ಅವಧಿಯಲ್ಲಿ ಗಣಪತಿ ಕೆರೆಯ ಅಭಿವೃದ್ಧಿಗೆ ಸರಕಾರದ ಯಾವುದೇ ಅನುದಾನವನ್ನೂ ಉಪಯೋಗಿಸುವುದಿಲ್ಲ. ಬದಲಿಗೆ ನಬಾರ್ಡ್ ಹಣ ಮಾತ್ರ ಬಳಕೆ ಮಾಡಿಕೊಳ್ಳಲಾಗುತ್ತದೆ. ಸದ್ಯ ಕೆರೆ ಸುತ್ತಲಿನ ಭಾಗದಲ್ಲಿ ಸಾರ್ವಜನಿಕರ ಓಡಾಟಕ್ಕೆ ಅನುಕೂಲವಾಗುವಂತೆ ರಸ್ತೆ, ವಿದ್ಯುತ್ ದೀಪ ಅಳವಡಿಕೆ, ಸುಣ್ಣ ಬಣ್ಣ ಹೊಡೆಸಿ ಸುಂದರವಾಗಿಸಲಾಗುತ್ತದೆ ಎಂದರು.

ಸೂಚಿಸಲಾಗಿದೆ. ಎಲ್ಲರೂ ಶ್ರದ್ಧಾಭಕ್ತಿಯಿಂದ ವಿಘ್ನನಿವಾರಕನನ್ನು ಪೂಜಿಸೋಣ ಎಂದರು.

ಅಡಕೆ ಬೆಳೆಗಾರರ ಸಮಸ್ಯೆಯನ್ನು ಸರಕಾರದ ಗಮನಕ್ಕೆ ತರಲಾಗಿದ್ದು, ಮುಖ್ಯಮಂತ್ರಿಗಳು ತೋಟಗಾರಿಕಾ ಸಚಿವರೊಂದಿಗೆ ಚರ್ಚಿಸಿ ಕ್ರಮ ತೆಗೆದುಕೊಳ್ಳುವ ಭರವಸೆ ನೀಡಿದ್ದಾರೆ. ಕೊಳೆರೋಗದಿಂದ ತೀವ್ರ ಸಂಕಷ್ಟ ಎದುರಿಸುತ್ತಿರುವ ಬೆಳೆಗಾರರಿಗೆ ಅಗತ್ಯ ಬೆಂಬಲ ನೀಡಲಾಗುವುದು. ಬೆಳೆಗಾರರ ನಿಯೋಗವನ್ನೂ ಮುಖ್ಯಮಂತ್ರಿಗಳ ಬಳಿ ಒಯ್ಯಲಾಗುತ್ತದೆ ಎಂದು ಭರವಸೆ ನೀಡಿದರು.

ಪೌರಾಯುಕ್ತ ಎಚ್.ಕೆ.ನಾಗಪ್ಪ, ಪ್ರಮುಖರಾದ ಕಲಸೆ ಚಂದ್ರಪ್ಪ, ನಗರಸಭೆ ಸದಸ್ಯರಾದ ಕುಸುಮ ಸುಬ್ಬಣ್ಣ, ಸಬೀನಾ ತನ್ವೀರ್, ಗಣಪತಿ ಮಂಡಗಳಲೆ, ಎನ್.ಲಲಿತಮ್ಮ, ಶಬಾನ, ಎಲ್. ಚಂದ್ರಪ್ಪ, ಪರಿಮಳ, ಉಷಾ ಮೊದಲಾದವರು ಹಾಜರಿದ್ದರು.

# ನೂತನ ಸದಸ್ಯತ್ವ ಅಭಿಯಾನಕ್ಕೆ ಕರ್ನಾಟಕ ರಾಜ್ಯ ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ ಚಾಲನೆ

ಮುದ್ದೇಬಿಹಾಳ: ಪಟ್ಟಣದ ಸಂಗಮೇಶ ನಗರದಲ್ಲಿ ಬಿಜೆಪ ತಾಲೂಕಾ ಮಂಡಲದಿಂದ ಬಿಜೆಪಿ ನೂತನ ಸದಸ್ಯತ್ವ ಅಭಿಯಾನಕ್ಕೆ ಕರ್ನಾಟಕ ರಾಜ್ಯ ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ ಎ ಎಸ್ ಪಾಟೀಲ(ನಡಹಳ್ಳಿ) ಅವರು ಮಂಗಳವಾರ ಚಾಲನೆ ನೀಡಿದರು.

ಈ ವೇಳೆ ಕರ್ನಾಟಕ ರಾಜ್ಯ ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ ಎ ಎಸ್ ಪಾಟೀಲ(ನಡಹಳ್ಳಿ) ಅವರು ಮಾತನಾಡಿ ದೇಶದಲ್ಲಿ ಪ್ರದಾನಿ ನರೇಂದ್ರ ಮೋದಿಯವರ ನೇತೃತ್ವದ ಕೇಂದ್ರ ಸರಕಾರ ಉತ್ತಮ ಆಡಳಿತ ಮತ್ತು ಆರ್ಥಿಕ ಸುಭದ್ರತೆಯನ್ನು ಕಂಡು ವಿದೇಶಿಗರು ಹಾಡಿಹೊಗಳುತ್ತಿದ್ದಾರೆ. ಬ್ರಷ್ಟಾಚಾರ ಮುಕ್ತ ಬಲಿಷ್ಟ ರಾಷ್ಟ ಕಟ್ಟುವಲ್ಲಿ ಪ್ರಧಾನಿ ಬಲಪಡಿಸಬೇಕಾದರೇ ದೇಶದಲ್ಲೆಡೆ ಬಾಜಪ ಸದಸ್ಯರ ಸಂಖ್ಯೆ ಹೆಚ್ಚಿಸುವ ಮೂಲಕ ಭಾರತಿಯ ಸಂವಿದಾನದಲ್ಲಿ ಅಳವಡಿಸಿರುವ ಎಲ್ಲ ಮೌಲ್ಯಗಳ ಅನುಸಾರ ಉತ್ತಮ ಸಾಮಾಜಿಕ ಸೇವೆ ಸಲ್ಲಿಸುವ ಗುರಿಹೊಂದಿದ ಏಕೈಕ ಬಿಜೆಪಿ ಪಕ್ಷವನ್ನಾಗಿ ಮಾಡಲು ಎಲ್ಲ ಕಾರ್ಯಕರ್ತರ ಪ್ರಮುಖ ಪಾತ್ರವಹಿಸುತ್ತದೆ. ಕೇವಲ ಚುನಾವಣೆಗಳು ಬಂದಾಗ ಮಾತ್ರ ಕಾಂಗ್ರೆಸ್ ಪಕ್ಷ ಸದಸ್ಯತ್ವ ಪ್ರಾರಂಭಿಸುತ್ತದೆ ಆದರೇ ಬಾಜಪಾ ಹಾಗಲ್ಲ ಪ್ರತಿ ವರ್ಷವೂ ಪ್ರತಿ ಗ್ರಾಮ ಬೂತ ಮಟ್ಟದಿಂದಲೂ ಲಕ್ಷಾಂತರ ಜನರನ್ನು ಸದಸ್ಯತ್ವ ಪಡೆದುಕೊಳ್ಳುವ ಮೂಲಕ ಇಡೀ ವಿಶ್ವದಲ್ಲಿಯೇ ಅತಿದೊಡ್ಡ ರಾಜಕೀಯ ಪಕ್ಷ ಮಾತ್ರವಲ್ಲದೇ ಪ್ರಜಾಸತ್ಯಾತ್ಮ ಪಕ್ಷವಾಗಿ ಬೆಳೆದು ನಿಂತಿದೆ.ಈ ನಿಟ್ಟಿನಲ್ಲಿ ಮತಕ್ಷೇತ್ರದ ಎಲ್ಲ ಕಾರ್ಯಕರ್ತರು ಹಾಗೂ ಮುಖಂಡು ಸಧ್ಯ ಕೇಂದ್ರದ ವರಿಷ್ಠರು ಒಟ್ಟು 60 ಸಾವಿರ ಸದಸ್ಯತ್ವ ಮಾಡುವ ಗುರಿ ನೀಡಿದ್ದು ಎಲ್ಲ ಕಾರ್ಯಕರ್ತರು ಪ್ರಧಾನ ನರೇಂದ್ರ ಮೋದಿಯವರ ಜನಪರ ಆಡಳಿತ ಮತ್ತು ಸಾಧನೆಗಳ ಬಗ್ಗೆ ಜನರಲ್ಲಿ ತಿಳಿಸುವ ಮೂಲಕ ಹೆಚ್ಚೆಚ್ಚು ಸದಸ್ಯತ್ವ ಮಾಡುವಲ್ಲಿ ಶ್ರಮಿಸಬೇಕು ಎಂದರು. ರಾಜ್ಯದಲ್ಲಿ ಕಾಂಗ್ರೆಸ್ ಸರಕಾರದ ಒಂದಲ್ಲ ಒಂದು ರೀತಿಯ ದಿನಕ್ಕೊಂದು



ಹಗರಣಗಳು ಬೆಳಕಿಗೆ ಬರುತ್ತಿವೆ ಬ್ರಷ್ಟಾಚಾರ ಹೆಚ್ಚಾಗಿದೆ ಈ ಹಿನ್ನೇಲೆಯಲ್ಲಿ ಪ್ರಸ್ತುತ ರಾಜ್ಯದ ಕಾಂಗ್ರೆಸ್ ಸರಕಾರ ಉತ್ತಮ ಜನಪರ ಆಡಳಿತ ನೀಡುವಲ್ಲಿ ಸಂಪೂರ್ಣ ವಿಫಲವಾಗಿದೆ. ಈ ಹಿಂದೆ ನಮ್ಮ ಸರಕಾರದ ಅವಧಿಯಲ್ಲಿ ಕೈಗೊಂಡಿರುವ ಸುಮಾರು 1500 ಕೋಟಿಗಳ ಅನುದಾನದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನ ಬಿಡುಗಡೆಗೊಂಡಿಲ್ಲ ಅದನ್ನು ಹಣಬಿಡುಗಡೆ ಮಾಡಿಸಲು ಸ್ಥಳಿಯ ಶಾಸಕ ಸಿ ಎಸ್ ನಾಡಗೌಡ ಸಾಧ್ಯವಾಗಿಲ್ಲ,

ರಾಜ್ಯದಲ್ಲಿ ತಮ್ಮದೇಯಾದ ಕಾಂಗ್ರೆಸ್ ಸರಕಾರ ಅಧಿಕಾರದಲ್ಲಿದ್ದರೂ ಕಳೇದ 18 ತಿಂಗಳಲ್ಲಿ ಮತಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಒಂದು ಕೋಟಿ ಹಣವನ್ನು ಕೂಡಾ ತಂದಿದ್ದರೆ ತಿಳಿಸಿ ಬಹಿರಂಗವಾಗಿ ಚರ್ಚೆಗೆ ನಾನು ಸದಾಸಿದ್ಧನಿದ್ದೇನೆ ಎಂದು ಸವಾಲೇಸೆದರು. ನಾನು ಅಧಿಕಾರದಲ್ಲಿದ್ದಾಗ ನನ್ನ ಬಗ್ಗೆ ಇಲ್ಲ ಸಲ್ಲದ ಸುಳ್ಳು ಆರೋಪಗಳನ್ನು ಮಾಡಿ ಜನರ ದಾರಿ ತಪ್ಪಿಸಿ ಈ ಬಾರಿ ಚುನಾವಣೆಯಲ್ಲಿ ಗೆದ್ದು ಬಂದಿದ್ದಿರಿ, ಚುನಾವಣೆಯಲ್ಲಿ ಸೋಲು ಗೆಲುವು ಸಾಮಾನ್ಯ ಎರಡನ್ನು ಸಮಾನವಾಗಿ ಸ್ವೀಕರಿಸಿದ್ದೇನೆ ಹಾಗಂತ ನಾನು ಸುಮ್ಮನೆ ಕುಳಿತುಕೊಳ್ಳುವ ಪ್ರಶ್ನೇಯೇ ಇಲ್ಲ ಈಗಾಗಲೇ ಮತಕ್ಷೇತ್ರದ ಜನ ನಿಮ್ಮ ಸರಕಾರದ ಮತ್ತು ನಿಮ್ಮ ದುರಾಡಳಿತವನ್ನು ಪ್ರಶ್ನಿಸುತ್ತಿದ್ದಾರೆ. ನಿಮ್ಮ ಹಿಂಬಾಲಕರು ಕೆಬಿಜೆಎನ್‌ಎಲ್ ಇಲಾಖೆಯಲ್ಲಿ ಕಲೇಕ್ಷನ್ ಏಜೇಂಟರಾಗಿದ್ದಾರೆ ಜೊತೆಗೆ ಗ್ರಾಮ ಪಂಚಾಯಿತಿ ತಾಲೂಕು ಪಂಚಾಯಿತಿ ಗಳಲ್ಲಿ ಬೋಗಸ್ ಬಿಲ್ಲ ಎತ್ತುವ ಕಾರ್ಯ ಮಾಡುತ್ತಿರುವವರು ಯಾರು ಎಂದು ಪ್ರಶ್ನಿಸಿದರು. ನಮ್ಮ ಅವಧಿಯಲ್ಲಿ ಕೈಗೊಂಡಿರುವ ಕಾಮಗಾರಿಗಳನ್ನು ನಿರ್ಮಿಸಿದ ಗುತ್ತಿಗೆದಾರರಿಗೆ ಬಿಲ್ಲ ಮಂಜೂರಿ ಮಾಡಬಾರದು ಎಂದು ಅಧಿಕಾರಿಗಳಿಗೆ ತಾಕಿತು ಮಾಡುತ್ತಾರೆ. ಜೊತೆಗೆ ವಿವಿಧ ಕಾಮಗಾರಿಗಳನ್ನು ನಿಲ್ಲಿಸುವಂತೆ ನಿಮ್ಮ ಕಾಂಗ್ರೆಸ್ ಪುಡಿ ಪುಡಾರಿಗಳು ಒತ್ತಾಯ ಮಾಡುತ್ತಾರೆ ಎಂಬ ಮಾಹಿತಿ ತಿಳಿದುಬಂದಿಗೆ ನಿವೇಷ್ಟು ಪುಡಾರಿಗಳಿದ್ದಿರಿ ಎಂಬುದು ನನಗೆ ಚನ್ನಾಗಿ ಗೊತ್ತಿದೆ ನಿಮಗಿಂತ ದೊಡ್ಡ ಪುಡಾರಿ ನಾನಿದ್ದೇನೆ ಆದರೇ ನಾನ್ಯಾವತ್ತಿಗೂ ಪುಡಾರಿಕೆ ಮಾಡಿಲ್ಲ ಇನ್ನುಮುಂದೆ ಅದು ಅನಿವಾರ್ಯವಾಗ ಬಹುದು. ಸಧ್ಯ ತಾಲೂಕಿನಲ್ಲಿ ಎಷ್ಟು ಜನ ಕಾಂಗ್ರೆಸ್ ಪುಡಿ ಪುಡಾರಿಗಳಿದ್ದಿರಿ ಮುಂದಿನ ಮೂರುವರೇ ವರ್ಷದಲ್ಲಿ ರಾಜ್ಯದಲ್ಲಿ ನಮ್ಮದೇ ಸರಕಾರ ಬರುತ್ತೇ ಮತ್ತೆ ನಾನೇ ಗೆದ್ದು ಬರುತ್ತೇನೆ ಈಗಾಗಲೇ ನಿಮ್ಮ ಲಿಷ್ಟ್ ರೇಡಿಮಾಡಿಕೊಂಡಿದ್ದೇನೆ ಆಗ ಮನೆ ಮನೆ ಕಿತ್ತಿಸುತ್ತೇ ಎಚ್ಚರದಿಂದಿರಿ ಎಂದರು.

ನಮ್ಮ ಬಿಜೆಪಿ ಕಾರ್ಯಕರ್ತರಿಗೆ ಪೋಲಿಸ್ ಇಲಾಖೆ ಮೂಲಕ ತೊಂದರೆ ಕೋಡುವುದು ಸರಿಯಲ್ಲ ಪಿಎಸೈ ಸೇರಿದಂತೆ ಕೆಲವು ಪೋಲಿಸರು ಕಾಂಗ್ರೆಸ್ ಕಚೇರಿಯಂತೆ ಬಿಂಬಿಸಬೇಡಿ ಹಾಗೇನಾದರೂ ಕಂಡು ಬಂದರೇ ನಾನು ಸುಮ್ಮನಿರಲ್ಲ ನಮ್ಮ ಅಧಿಕಾರ ಬಂದ ಮೇಲೆ ನಿಮ್ಮನ್ನು ಸುಮ್ಮನೆ ಬೀಡುವೂದೇ ಇಲ್ಲ ಎಂಬುದು ಅರ್ಥ ಮಾಡಿಕೊಳ್ಳಬೇಕು. ಕಳೇದ ಮೂರುವರೆ ವರ್ಷದಲ್ಲಿ ನನ್ನ ಅವಧಿಯಲ್ಲಿ ನಾನೇಷ್ಟು ಅನುದಾನ ತಂದಿದ್ದೇನೆಯಾವೇಲ್ಲ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಿದ್ದೇನೆ ಎಂಬುದನ್ನು ದಾಖಲೆ ಸಮೇತ ಬರುತ್ತೇನೆ ನಿವು ಶಾಸಕರಾಗಿ ಒಂದೂವರೆ ವರ್ಷದಲ್ಲಿ ನೀವೇಷ್ಟು ನಿಮ್ಮ ಸರಕಾರದಿಂದ ಎಷ್ಟು ಅನುದಾನ ತಂದಿದ್ದಿರಿ ನೀವು ದಾಖಲೆ ಸಮೇತ ಬನ್ನಿ ಬಹಿರಂಗ ಚರ್ಚೆ ಮಾಡೋಣ ಎಂದು ವಾಗ್ದಾಳಿ ನಡೆಸಿದರು.

ಈ ವೇಳೆ ತಾಲೂಕಾ ಮಂಡಲದ ಅಧ್ಯಕ್ಷ ಜಗಧೀಶ ಪಂಪಣ್ಣವರ, ಮುಖಂಡರಾದ ರಾಜಶೇಖರ ಮ್ಯಾಗೇರಿ, ಸೋಮನಗೌಡ ಬಿರಾದಾರ,ಪ್ರಭು ಕಡಿ, ಮಲಕೇಂದ್ರಾಯಗೌಡ ಪಾಟೀಲ, ಡಾ, ವಿರೇಶ ಪಾಟೀಲ, ಪುರಸಭೆ ಸದಸ್ಯರಾದದ ಸಂಗಮ್ಮ ದೇವರಳ್ಳಿ, ಸಹನಾ ಬಡಿಗೇರ, ಸಿದ್ಧರಾಜ ಹೊಳಿ, ರೇವಣಸಿದ್ದಪ್ಪ ಮಸೂತಿ, ಸಂಜು ಬಾಗೇವಾಡಿ, ಶ್ರೀಶೈಲ ದೊಡಮನಿ, ಕಮಲಾ ಇಂಗಳೇಶ್ವರ, ನೀಲಮ್ಮ ಸಾಲಿ, ರಾಜು ಬಳ್ಳೊಳ್ಳಿ, ಶಿವೂ ಅತ್ತೂರ, ಪ್ರೀತಿ ಕಂಬಾರ, ಕಾವೇರಿ ಕಂಬಾರ ಸೇರಿದಂತೆ ಹಲವರು ಇದ್ದರು.



ದಿನಾಂಕ 3/ 9 /2024 ಮಂಗಳವಾರ ಬೆಳಿಗ್ಗೆ 11 ಗಂಟೆಗೆ ಶಿವಮೊಗ್ಗ ಜಿಲ್ಲಾ ಜಯ ಕರ್ನಾಟಕ ಸಂಘಟನೆಯ ಜಿಲ್ಲಾ ಮಹಿಳಾ ಅಧ್ಯಕ್ಷರಾದ ಶ್ರೀಮತಿ ನ ನಾಜಿಮಾ ರವರ ಅನುಮತಿ ಮೇರೆಗೆ ಹಾಗೂ ಸಾಗರ ತಾಲೂಕು ಜಯ ಕರ್ನಾಟಕ ಸಂಘಟನೆಯ ಮಹಿಳಾ ಘಟಕದ ವತಿಯಿಂದ ಸಿಗಂದೂರು ಹೊಳೆಬಾಗಿಲು ಶರಾವತಿ ಹಿನ್ನೀರಿನಲ್ಲಿ ಬಾಗಿನ ಸಮರ್ಪಣೆ ಮಾಡುವ ಕಾರ್ಯಕ್ರಮ ಸಾಗರ ತಾಲೂಕು ಅಧ್ಯಕ್ಷರಾದ ಶ್ರೀಮತಿ ರೇಖಾ ಕೃಷ್ಣಮೂರ್ತಿಯವರ ಅಧ್ಯಕ್ಷತೆಯಲ್ಲಿ ನಡೆಯಿತು ಈ ಸಂದರ್ಭದಲ್ಲಿ ಜಯ ಕರ್ನಾಟಕ ಸಂಘಟನೆಯ ಪ್ರಧಾನ ಕಾರ್ಯದರ್ಶಿಯಾದ ದೀಪಿಕಾ ಸಂಘಟನಾ ಕಾರ್ಯದರ್ಶಿಯಾದ ಶ್ರೀಮತಿ ಮಂಜುಳಾ ಚಂದ್ರಪ್ಪ ಕಾರ್ಯದರ್ಶಿಯಾದ ಪಾರ್ವತಿ ಮೋಹನ್ ಸುಜಾತ ಶೈಲಜಾ ಪ್ರಭ ಸುಮತಿ ಶೋಭಾ ದೀಕ್ಷಿತ್ ಮತ್ತಿತರ ಹಾಜರಿದ್ದರು????

# ನಿರ್ಮಾಪಕ ಉಮಾಪತಿ ಶ್ರೀನಿವಾಸಗೌಡರವರ ಸಮಾಜ ಸೇವೆ ಅನನ್ಯ ಮಣಿಗೆರೆ ರಾಮಚಂದ್ರೇಗೌಡ

ಮಂಡ್ಯ:– ಕನ್ನಡ ಚಿತ್ರರಂಗದ ಖ್ಯಾತ ನಿರ್ಮಾಪಕ ಉಮಾಪತಿ ಶ್ರೀನಿವಾಸಗೌಡರವರು ಅನೇಕ ಸಮಾಜಮುಖಿ ಕಾರ್ಯಗಳನ್ನು ಮಾದರಿಯಾಗಿದೇ ಅವರ ಸೇವಾ ಮನೋಭಾವ ಗುಣವು ಅನನ್ಯವಾದ್ದುದು ಎಂದು ಉಮಾಪತಿ ಶ್ರೀನಿವಾಸಗೌಡ ಅಭಿಮಾನಿ ಸಂಘದ ರಾಜ್ಯಾಧ್ಯಕ್ಷ ಮಣಿಗೆರೆ ರಾಮಚಂದ್ರೇಗೌಡ ತಿಳಿಸಿದರು.

ಮಂಡ್ಯ ನಗರದ ಸೇವಾ ಕಿರಣ ವೃದ್ದಾಶ್ರಮದಲ್ಲಿ ಹಿರಿಯ ವೃದ್ಧರಿಗೆ ಉಮಾಪತಿ ಶ್ರೀನಿವಾಸಗೌಡ ರವರ ಅಭಿಮಾನಿ ಸಂಘದ ವತಿಯಿಂದ ಉಚಿತ ಕಂಬಳಿ ಹಾಗೂ ಭೋಜನ ವ್ಯವಸ್ಥೆ ಮಾಡಲಾಯಿತು.




ಇದೆ ಸಂದರ್ಭದಲ್ಲಿ ಉಮಾಪತಿ ಶ್ರೀನಿವಾಸಗೌಡ ಅಭಿಮಾನಿ ಸಂಘದ ರಾಜ್ಯಾಧ್ಯಕ್ಷ ಮಣಿಗೆರೆ ರಾಮಚಂದ್ರೇಗೌಡ ಮಾತನಾಡಿ ಉಮಾಪತಿ ಶ್ರೀನಿವಾಸಗೌಡರವರು ಅತ್ಯಂತ ಹೃದಯ ವೈಶಾಲ್ಯತೆಯುಳ್ಳ ಜನನಾಯಕರಾಗಿದ್ದು ,ಸಿನಿಮಾರಂಗ,ರಾಜಕೀಯ ಸೇವಾರಂಗದಲ್ಲಿ ಹೆಚ್ಚಿನ ಸಮಾಜ ಸೇವಾ ಕಾರ್ಯಗಳನ್ನು ಮಾಡಿದ್ದಾರೆ.

ಅವರ ಆ ಸಮಾಜ ಸೇವಾ ಕಾರ್ಯಗಳನ್ನು ಆದರ್ಶಗಳನ್ನು ನಾವು ಅನುಸರಿಸಿ ಹಿರಿಯ ವ್ಯಕ್ತಿಗಳ ಹಿತಕಾಯಲು ನಾವು ಅವರಿಗೆ ನಾವು ಸಹಾಯಾಸ್ತ ಮಾಡುವ ನಿಟ್ಟಿನಲ್ಲಿ ಅಳಿಲುಸೇವೆ ಮಾಡುತ್ತಿದ್ದೇವೇ ಎಂದು ತಿಳಿಸಿದರು. ಇದೆ ಸಂದರ್ಭದಲ್ಲಿ ಉಪಾಧ್ಯಕ್ಷರಾದ ಹಿಟ್ಟನಹಳ್ಳಿ ಕೊಪ್ಪಲು ಚೇತನ್, ಸಂಘದ ಪದಾಧಿಕಾರಿಗಳಾದ ಸ್ವರ್ಣಸಂದ್ರ ನಾಗೇಂದ್ರ, ಕುಮಾರ್ ,ಹರೀಶ್, ಜಯಂತ್, ದೇವರಾಜ್, ಅಭಿ,ಮಲ್ಲೇಶ್, ಆದರ್ಶ ,ಗುರು, ಹೊನ್ನಯಕನಹಳ್ಳಿ ಗಣೇಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಬುಧವಾರ 04 ಸೆಪ್ಟೆಂಬರ್ 2024
WEDNESDAY 04 September 2024

# ಮಾನವ ಸರಪಳಿ ರಚಿಸಲು ಅಗತ್ಯ ಸಿದ್ಧತೆಗೆ ಕ್ರಮವಹಿಸುವಂತೆ ಜಿಲ್ಲಾಧಿಕಾರಿ ಸತ್ಯಭಾಮ ಅವರು ಅಧಿಕಾರಿಗಳಿಗೆ ಸೂಚನೆ

ಹಾಸನ : ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮದ ಅಂಗವಾಗಿ ಸೆ.15 ರಂದು ಜಿಲ್ಲೆಯಲ್ಲಿ ಮಾನವ ಸರಪಳಿ ರಚಿಸಲು ಅಗತ್ಯ ಸಿದ್ಧತೆಗೆ ಕ್ರಮವಹಿಸುವಂತೆ ಜಿಲ್ಲಾಧಿಕಾರಿ ಸತ್ಯಭಾಮ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು ಈ ಮಾನವ ಸರಪಳಿ ರಚನೆ ಕಾರ್ಯಕ್ರಮ ಸೆ.15 ರಂದು ಬೆಳಿಗ್ಗೆ 9 ಗಂಟೆಯಿಂದ 9.30 ರಾಜ್ಯದ 31 ಜಿಲ್ಲೆಗಳಲ್ಲಿಯೂ ಏಕ ಕಾಲದಲ್ಲಿ ನಡೆಯಲಿದೆ. ಹಾಸನ ಜಿಲ್ಲೆಯಲ್ಲಿ ಅರಕಲಗೂಡು ತಾಲ್ಲೂಕಿನ ಶಿರಂಗಾಲದಿಂದ ಪ್ರಾರಂಭಗೊಂಡು ಬೇಲೂರು ತಾಲ್ಲೂಕಿನ ಚಿಕ್ಕಮಂಗಳೂರು ಗಡಿಯವರೆಗೆ ಮಾನವ ಸರಪಳಿ ನಡೆಯಲಿದೆ. ಈ ಕಾರ್ಯಕ್ರಮದಲ್ಲಿ ಕಡ್ಡಾಯವಾಗಿ ಎಲ್ಲಾ ಅಧಿಕಾರಿಗಳು ಸಿಬ್ಬಂದಿಗಳು ಭಾಗವಹಿಸಲು ಸೂಚಿಸಿದರಲ್ಲದೆ, ಮೂರು ತಾಲ್ಲೂಕುಗಳ ವ್ಯಾಪ್ತಿಯಲ್ಲಿ ಬರುವ ಶಾಲಾ ಕಾಲೇಜು ಮಕ್ಕಳು ಸೇರಿದಂತೆ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಬೇಕು. ಹಾಸನ ಜಿಲ್ಲೆಯ ಅರಕಲಗೂಡು, ಹಾಸನ ಹಾಗೂ ಬೇಲೂರು ತಾಲ್ಲೂಕು ವ್ಯಾಪ್ತಿಯಲ್ಲಿ ಮಾನವ ಸರಪಳಿ ಕಾರ್ಯಕ್ರಮ ಜರುಗಲಿದೆ. ನಿಯೋಜಿತ ಸ್ಥಳದಲ್ಲಿ ಅಂದು ಬೆಳಿಗ್ಗೆ 8.30 ಕ್ಕೆ ಹಾಜರಿದ್ದು, ಕಾರ್ಯಕ್ರಮ ಯಶಸ್ವಿಗೊಳಿಸಲು ಜಿಲ್ಲಾಧಿಕಾರಿ ಅವರು ತಿಳಿಸಿದರು.

ಮಾನವ ಸರಪಳಿ ಕಾರ್ಯಕ್ರಮದ ನಂತರ ಅಂದು ಜಿಲ್ಲಾ ಕ್ರೀಡಾಂಗಣದಲ್ಲಿ ನಡೆಯುವ ವೇದಿಕೆ ಕಾರ್ಯಕ್ರಮದಲ್ಲಿ ಸಂವಿಧಾನ ಪೀಠಿಕೆ ಓದಲಾಗುವುದು. ಈ ಕಾರ್ಯಕ್ರಮದಲ್ಲಿ ಕಡ್ಡಾಯವಾಗಿ ಎಲ್ಲಾ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗ ಭಾಗವಹಿಸಬೇಕು. ಜನಪ್ರತಿನಿಧಿಗಳು, ಎಲ್ಲಾ




ಸಮುದಾಯಗಳ ಸಂಘಟನೆಗಳು, ರೆಡ್ ಕ್ರಾಸ್ ಸಂಸ್ಥೆ, ಸ್ವಸಹಾಯ ಸಂಘಗಳು, ಜಿಲ್ಲೆಯ ಎನ್.ಜಿ.ಓ. ಸಂಸ್ಥೆಗಳು, ಜಿಲ್ಲಾ ಮಟ್ಟದ ಪ್ರಶಸ್ತಿ ಪುರಸ್ಕೃತರು. ನಗರಸಭಾ ಪೌರ ಕಾರ್ಮಿಕರು, ಸ್ಕೌಟ್ ಆಂಡ್ ಗೈಡ್ಸ್, ಆಶಾ ಕಾರ್ಯಕರ್ತರು, ಅಂಗನವಾಡಿ ಶಿಕ್ಷಕರು. ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಮಾನವ ಸರಪಳಿ ರೂಟ್ ನಲ್ಲಿ ಬರುವ ಅಕ್ಕ ಪಕ್ಕದ ಶಾಲೆಗಳ ಎಲ್ಲಾ ವಿದ್ಯಾರ್ಥಿಗಳು ಅವರ ಸಮವಸ್ತ್ರದ ಸಮೇತ ಹಾಜರಾಗುವಂತೆ ಕ್ರಮಕೈಗೊಳ್ಳಲು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರಿಗೆ ನಿರ್ದೇಶನ ನೀಡಿದರು.

ಎಲ್ಲಾ ಗ್ರಾಮ ಪಂಚಾಯಿತಿ ಪಿ.ಡಿ.ಓ.ಗಳು ತಮ್ಮ ಗ್ರಾಮ ಪಂಚಾಯ್ತಿ ವ್ಯಾಪ್ತಿಯಲ್ಲಿನ ಸ್ವ ಸಹಾಯ ಸಂಘಗಳ ಸದಸ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಲು ಕ್ರಮವಹಿಸಬೇಕು.

ತಾಲ್ಲೂಕು ಮಟ್ಟದಲ್ಲಿ ಆಯಾ ವಿಧಾನ ಸಭಾ ಕ್ಷೇತ್ರಗಳ ಶಾಸಕರ ಅಧ್ಯಕ್ಷತೆಯಲ್ಲಿ ತಹಸೀಲ್ದಾರ್ ಮತ್ತು ಕಾರ್ಯ ನಿರ್ವಾಹಕ ಅಧಿಕಾರಿಗಳು ಎಲ್ಲಾ ಅಧಿಕಾರಿಗಳ ಮತ್ತು ಸಂಘ ಸಂಸ್ಥೆಗಳೊಂದಿಗೆ ಸಭೆ ನಡೆಸುವಂತೆ ಸೂಚಿಸಿದರು.

ಅಪರ ಜಿಲ್ಲಾಧಿಕಾರಿ ಕೆ.ಟಿ.ಶಾಂತಲಾ ಅವರು ಮಾತನಾಡಿ ಮಾನವ ಸರಪಳಿ ಕಾರ್ಯಕ್ರಮದಲ್ಲಿ ಭಾಗವಹಿಸುವವರಿಗೆ ಪ್ರಮಾಣ ಪತ್ರ ದೊರೆಯಲಿದೆ. ಸೆ.10 ರಂದು ವೆಬ್‌ಸೈಟ್ ಲಿಂಕ್ ಬಿಡುಗಡೆ ಮಾಡಲಾಗುವುದು ಅದರಲ್ಲಿ ಸೆ.26 ವರೆಗೆ ಮಾನವ ಸರಪಳಿ ಛಾಯಚಿತ್ರ ಅಪ್ಲೋಡ್ ಮಾಡಲು ಅವಕಾಶವಿರುತ್ತದೆ ಎಂದು ತಿಳಿಸಿದರು. ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಚಂದ್ರಶೇಖರ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ತಮ್ಮಯ್ಯ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

ವರದಿ: ಯತೀಶ್ ಶೆಟ್ಟಿಹಳ್ಳಿ ಹಾಸನ.

# ಕಳಪೆ ಗುಣಮಟ್ಟದ ಹಾಲು ಪೂರೈಕೆ ಮಾಡುವುದು ಅಕ್ಷಮ್ಯ ಅಪರಾಧ



ಕೆ.ಆರ್.ಪೇಟೆ: ಡೇರಿಯಲ್ಲಿ ಕಳಪೆ ಗುಣಮಟ್ಟದ ಹಾಲು ಪೂರೈಕೆ ಮಾಡುವುದು ಅಕ್ಷಮ್ಯ ಅಪರಾಧ ಎಂದು ಉತ್ಪಾದಕರಿಗೆ ಮನ್ಮುಲ್ ನಿರ್ದೇಶಕ ಡಾಲು ರವಿ ತಿಳಿಸಿದರು .

ತಾಲೂಕಿನ ಲಕ್ಷ್ಮಿಪುರ, ಕಾಗೇಪುರ,ಗ್ರಾಮಗಳಲ್ಲಿ ಉತ್ಪಾದಕರ ಸಹಕಾರ ಸಂಘದ 2023-24ನೇ ಸಾಲಿನ ಸರ್ವ ಸದಸ್ಯರ ಮಾಹ ಸಭೆ ಉದ್ಘಾಟಿಸಿ ಮಾತನಾಡಿದರು.ವೈಯಕ್ತಿಕ ಹಿತಾಸಕ್ತಿಗಾಗಿ ಕೆಲವರು ಕಳಪೆ ಗುಣಮಟ್ಟದ ಹಾಲು ಹಾಕುತ್ತಾರೆ. ಸಿಬ್ಬಂದಿಗೆ ಬೆದರಿಕೆಯೊಡ್ಡುತ್ತಾರೆ. ಇಂತಹ ಕ್ರಮಗಳಿಂದ ಸಂಘದ ಅಭಿವೃದ್ಧಿ ಕುಂಠಿತವಾಗುತ್ತದೆ. ಯಾರೇ ಆಗಲಿ ವೈಯಕ್ತಿಕ ವಿಚಾರಕ್ಕೆ ಸಂಬಂಧಿಸಿದಂತೆ ಹಾಲು ಉತ್ಪಾದಕರ ಸಹಕಾರ ಸಂಘಗಳ ಸಿಬ್ಬಂದಿ ಮೇಲೆ ಹಲ್ಲೆ, ಬೆದರಿಕೆಯೊಡ್ಡಿದರೆ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದರು.ಸಂಘ-ಸಂಸ್ಥೆಗಳಲ್ಲಿ ಹಲವು ಭಿನ್ನಾಭಿಪ್ರಾಯಗಳು ಸಹಜ. ಎಲ್ಲವನ್ನೂ ಬದಿಗೊತ್ತಿ ಸಂಘದ ಅಭಿವೃದ್ಧಿಗೆ ಎಲ್ಲರೂ ಕೈ ಜೋಡಿಸಿ ಕೆಲಸ ಮಾಡುವುದು ಅಗತ್ಯ. ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ಗುಣಮಟ್ಟದ ಹಾಲನ್ನು ಪೂರೈಕೆ ಮಾಡ ಬೇಕು. ಇದರಿಂದ ಸಂಘ ಆರ್ಥಿಕವಾಗಿ ಸಬಲರಾಗಲು ಸಾಧ್ಯವಾಗುತ್ತದೆ. ಈ ನಿಟ್ಟಿನಲ್ಲಿ ಸಹಕಾರ ನೀಡಬೇಕು ಎಂದರು.

ಸಭೆಯಲ್ಲಿ ಸಂಘದ ಅಧ್ಯಕ್ಷರು ಅಧ್ಯಕ್ಷತೆ ವಹಿಸಿದ್ದರು. ಇದೇ ವೇಳೆ ಅತಿ ಹೆಚ್ಚು ಹಾಲು ಪೂರೈಕೆ ಮಾಡಿದ ಸದಸ್ಯರಿಗೆ ಬಹುಮಾನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಮಾರ್ಗ ವಿಸ್ತರಣಾಧಿಕಾರಿಗಳಾದ ನಾಗಪ್ಪ ಅಲ್ಲಿಬಾದಿ, ಬಿ ಸಿ ಮಧು, ಲಕ್ಷ್ಮಿಪುರ ಸಂಘದ ಅಧ್ಯಕ್ಷ ಪ್ರಕಾಶ್,ಉಪಾಧ್ಯಕ್ಷ ಅನುಸೂಯ, ನಿರ್ದೇಶಕರಾದ ಚಂದ್ರೆಗೌಡ, ನಾಗರಾಜೇಗೌಡ, ಎಲ್. ಬಿ ಚಲುವರಾಜು, ಬಸವರಾಜು, ಎಲ್. ಬಿ ವಿಜಯಕುಮಾರ್, ರವಿ, ಬಸವರಾಜು, ಪರಮೇಶ್, ಸುಶೀಲಮ್ಮ, ಜಯಲಕ್ಷ್ಮಮ್ಮ,ಗ್ರಾ. ಪಂ ಸದಸ್ಯ ಹೇಮಂತ್ ಕುಮಾರ್,ಸಂಘದ ಕಾರ್ಯದರ್ಶಿ ರಮೇಶ್,ಹಾಲು ಪರೀಕ್ಷಕ ಮೋಹನ್ ಚಂದ್ರಕಲಾ, ಕಾಗೇಪುರ ಸಂಘದ ಅಧ್ಯಕ್ಷ ಸುಬ್ಬೇಗೌಡ, ಉಪಾಧ್ಯಕ್ಷ ಚಂದ್ರೆಗೌಡ,ನಿರ್ದೇಶಕರಾದ ವೆಂಕಟರಾಮು, ಗೋವಿಂದೇಗೌಡ, ದೇವರಾಜು, ಕೃಷ್ಣೆಗೌಡ, ಮಂಜೇಗೌಡ, ನಾಗೇಗೌಡ, ಕೃಷ್ಣಯ್ಯ, ದಮಯಂತಿ, ನಾಗಮ್ಮ, ಸಂಘದ ಕಾರ್ಯದರ್ಶಿ ಶಿವಕುಮಾರ್,ಸೇರಿದಂತೆ ಉಪಸ್ಥಿತರಿದ್ದರು.

ಸುದ್ದಿಯೊಂದಿಗೆ ಮನು ಮಾಕವಳ್ಳಿ ಕೆಆರ್‌ಪೇಟೆ

# ಎಮರ್ಜೆನ್ಸಿ ಗದ್ದಲದ ಮಧ್ಯೆ ಕಂಗನಾ ಹೊಸ ಚಿತ್ರ ಅನೌನ್ಸ್ – ಟೈಟಲ್ ಏನು ಗೊತ್ತಾ?!

ಈಗಾಗಲೇ ಎಮರ್ಜೆನ್ಸಿ ಸಿನಿಮಾ ಮೂಲಕ ಸಖತ್ ಸದ್ದು ಮಾಡ್ತಿರುವ ಸಂಸದೆ ಕಂಗನಾ ರಣಾವತ್ ಮಂಗಳವಾರ ತಮ್ಮ ಮುಂದಿನ ಸಿನಿಮಾದ ಬಗ್ಗೆ ಹೊಸ ಘೋಷಣೆ ಮಾಡಿದ್ದಾರೆ. ಭಾರತ ಭಾಗ್ಯ ವಿದ್ಧಾತ ಎಂಬ ವಿಭಿನ್ನ ಶೀರ್ಷಿಕೆಯ ಮೂಲಕ ಕಂಗನಾ ಮತ್ತೆ ಸುದ್ದಿಯಲ್ಲಿದ್ದಾರೆ.



ಹೌದು, ಕಂಗನಾ ನಿರ್ದೇಶನದ ಚೊಚ್ಚಲ ಸಿನಿಮಾ 'ಎಮರ್ಜೆನ್ಸಿ' ಸಾಕಷ್ಟು ನಿರೀಕ್ಷೆಗಳನ್ನು ಹುಟ್ಟುಹಾಕಿದ್ರೂ, ಕೊಂಚ ವಿವಾದಗಳ ಕಾರಣ ಸೆಂಟ್ರಲ್ ಬೋರ್ಡ್ ಆಫ್ ಫಿಲ್ಮ್ ಸರ್ಟಿಫಿಕೇಶನ್‌ನಿಂದ ಸರ್ಟಿಫಿಕೇಟ್ ಸಿಗೋದು ವಿಳಂಬದವಾಗಿದೆ. ಈ ಮಧ್ಯೆ ಕಂಗನಾ 'ಭಾರತ ಭಾಗ್ಯ ವಿದ್ಧಾತ' ಎಂಬ ಶೀರ್ಷಿಕೆಯ ಹೊಸ ಚಿತ್ರವನ್ನು ಘೋಷಿಸಿದ್ದಾರೆ.

ಈ ಚಿತ್ರಕ್ಕೆ ಮನೋಜ್ ತಪಾಡಿಯಾ ನಿರ್ದೇಶನ ಮತ್ತು ಚಿತ್ರಕಥೆ ಇರಲಿದ್ದು, ಯುನೋಯಾ ಫಿಲ್ಮ್ಸ್ ಮತ್ತು ಫ್ಲೋಟಿಂಗ್ ರಾಕ್ಸ್ ಎಂಟರ್‌ಟೈನ್‌ಮೆಂಟ್ ಅಡಿಯಲ್ಲಿ ಸಿನಿಮಾ ಮೂಡಿಬರಲಿದೆ. ಭಾರತ ಭಾಗ್ಯ ವಿದ್ಧಾತ' ಚಿತ್ರವು ಕಾರ್ಮಿಕ ವರ್ಗದ ಜನರ ಪ್ರಾಮುಖ್ಯತೆಯನ್ನು ಪ್ರತಿಬಿಂಬಿಸಲಿದ್ಯಂತೆ.

# ಸ್ಪೆಷಲ್ ಒಲಂಪಿಕ್ ಭಾರತ್ ಕರ್ನಾಟಕ ಘಟಕದಿಂದ ಒಂದು ದಿನದ ಕಾರ್ಯಾಗಾರ ಸ್ಪೆಷಲ್ ಮಕ್ಕಳಿಗೆ ಸ್ಪೆಷಲ್ ಒಲಂಪಿಕ್ಸ್

ಕೋಲಾರ: ಸ್ಪೆಷಲ್ ಒಲಂಪಿಕ್ಸ್ ಭಾರತ್(ಎಸ್.ಓ.ಬಿ-ಕೆ) ಕರ್ನಾಟಕ ಘಟಕದಿಂದ ವಿಶೇಷ ಶಿಕ್ಷಕರಿಗೆ ಮತ್ತು ಬಿ.ಅರ್.ಸಿ ಗಳಿಗೆ ಒಂದು ದಿನದ ಕಾರ್ಯಾಗಾರವನ್ನು ನಗರದ ಅಂತರಗಂಗಾ ವಿದ್ಯಾ ಸಂಸ್ಥೆಯ ಆವರಣದಲ್ಲಿ ಹಮ್ಮಿಕೊಂಡಿದ್ದರು. ಸ್ಪೆಷಲ್ ಒಲಂಪಿಕ್ ಭರತ್ ಕರ್ನಾಟಕ ರಾಜ್ಯ ಅಧ್ಯಕ್ಷರದಂತಹ ಶ್ರೀಮತಿ ಶಶಿಕಲಾ ಜೊಲ್ಲೆ ರವರು ನೀಡಿರುವಂತಹ ಆದೇಶದ ಮೇರೆಗೆ ರಾಜ್ಯದ ಪ್ರತಿಯೊಂದು ಜಿಲ್ಲೆಯಲ್ಲಿಯೂ ಸಹ ಸ್ಪೆಷಲ್ ಒಲಂಪಿಕ್ಸ್ ಭಾರತ್ ವತಿಯಿಂದ ಬುದ್ಧಿಮಾಂದ್ಯ ವಿದ್ಯಾರ್ಥಿಗಳು ವಿಶೇಷ ಕ್ರೀಡಾಕೂಟಗಳನ್ನು ಆಯೋಜನೆ ಮಾಡಬೇಕು.

ಆದ್ದರಿಂದ ಪ್ರತಿಯೊಂದು ಜಿಲ್ಲೆಯಲ್ಲಿ ಕಾರ್ಯಾಗಾರ ಮಾಡಬೇಕಾಗಿದೆ ಆದ್ದರಿಂದ ನಮ್ಮ ಕೋಲಾರ ಜಿಲ್ಲೆಯಲ್ಲಿಯು ಶನಿವಾರ ರಾಜ್ಯ ಉಪಾಧ್ಯಕ್ಷರಾದ ರುಪ್ ಸಿಂಗ್ ಮತ್ತು ರಾಜ್ಯ ಕಾರ್ಯದರ್ಶಿ ಅಮರೇಂದ್ರ ಅವರು ತರಬೇತಿಯನ್ನು ನಡೆಸಿದರು.

ಎಸ್.ಓ ಬಿ ಕೆ ರಾಜ್ಯ ಕಾರ್ಯದರ್ಶಿ ಅಮರೇಂದ್ರ ಅವರು ಮಾತನಾಡಿ ಇಂದು




ಕೋಲಾರದ ಅಂತರಗಂಗಾ ವಿದ್ಯಾ ಸಂಸ್ಥೆಯ ಆವರಣದಲ್ಲಿ ನಾವು ಸ್ಪೆಷಲ್ ಒಲಂಪಿಕ್ಸ್ ಭಾರತ್-ಕರ್ನಾಟಕ ವತಿಯಿಂದ ಜಿಲ್ಲಾಧ್ಯಕ್ಷರದ ಡಾ. ಕೆ.ಎಸ್.ಶಂಕರ್ ರವರ ನೇತೃತ್ವದಲ್ಲಿ ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಂಡಿದ್ದೆವು ಮುಂದಿನ ತಿಂಗಳು ಜಿಲ್ಲಾ ಮಟ್ಟದ ಕ್ರೀಡಾಕೂಟಗಳನ್ನು ಹಮ್ಮಿಕೊಂಡು ಅದರಲ್ಲಿ ಆಯ್ಕೆಯಾದ ವಿಶೇಷ ಚೇತನ ಮಕ್ಕಳನ್ನು ರಾಜ್ಯ ಮಟ್ಟಕ್ಕೆ ಆಯ್ಕೆಮಾಡಲಾಗುತ್ತದೆ.

ಆದ್ದರಿಂದ ಶಿಕ್ಷಕರು ತಾವು ತಮ್ಮ ವಿದ್ಯಾರ್ಥಿಗಳನ್ನು ಪೂರ್ವತಯಾರಿ ನಡೆಸಿ ಕ್ರೀಡಾಕೂಟದಲ್ಲಿ ಪಾಲ್ಗೊಳ್ಳಲು ತಿಳಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಉಪಾಧ್ಯಕ್ಷರಾದ ರುಪ್ ಸಿಂಗ್,ಕಾರ್ಯದರ್ಶಿ ಅಮರೇಂದ್ರ,ರಾಜ್ಯ ಆಯ್ಕೆ ಸಮಿತಿಯ ಸದಸ್ಯರಾದ ರವಿ,ತರಬೇತಿದರರಾದ ಮೌನಿಕ,

ಉತ್ತರ ಜಿಲ್ಲಾದ್ಯಾಕ್ಷರಾದ ಡಾ.ಕೆ,ಎಸ್.ಶಂಕರ್ ಉಪದ್ಯಾಕ್ಷರಾದ ಶ್ರೀಮತಿ ಕೆ.ಎಸ್ ಶಾರದ ಕಾರ್ಯದರ್ಶಿ ಪಿ.ಮೇಘರಾಜ್ ಸೇರಿದಂತೆ ಎಲ್ಲಾ ವಿಶೇಷ ಶಾಲೆಗಳ ಶಿಕ್ಷಕರು ಇದ್ದರು.

ವರದಿ: ಗೋಪಾಲಕೃಷ್ಣ, ಕೋಲಾರ(ಮಾಲೂರು)




# ಸನ್ಮಾರ್ಗಕ್ಕೆ ಬಸವಾದಿ ಶರಣರ ವಚನಗಳೇ ಆದರ್ಶ: ಅಮರಯ್ಯಸ್ವಾಮಿ

ಮುಂಜಾನೆ ವಾರ್ತೆ ಸುದ್ದಿ

ತಾಳಿಕೋಟಿ:ಲೋಕದ ಮೋಹದ ಹಿಂದೆ ಬಿದ್ದು ಬದುಕಿನ ಉದ್ದೇಶವನ್ನೇ ನಾವಿಂದು ಮರೆತಿದ್ದೇವೆ. ಎಲ್ಲವೂ ಒಂದು ದಿನ ನಶಿಸಿ ಹೋಗಲಿದೆ.

ನಾವು ಸಂಪಾದಿಸಿದ ಎಲ್ಲವನ್ನೂ ಇಲ್ಲಿಯೇ ಬಿಟ್ಟು ಹೋಗಬೇಕು ಆದ್ದರಿಂದ ಬದುಕು ಕೇವಲ ಆಸ್ತಿಗಾಗಿಯೇ ಇರದೆ ಅಸ್ತಿತ್ವಕ್ಕಾಗಿರಬೇಕು ಎಂದು ಬಸವಾದಿ ಶರಣರು ತಿಳಿಸಿದ್ದಾರೆ ಎಂದು ಸಾಹಿತಿ ಅಮರಯ್ಯಸ್ವಾಮಿ ಜಾಲಿಬೆಂಚಿ ಹೇಳಿದರು.

ಪಟ್ಟಣದ ಶ್ರೀ ಕಾಳಿಕಾದೇವಿ ಮಂದಿರದಲ್ಲಿ ಸೋಮವಾರ ಸಂಜೆ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ತಾಲೂಕ ಘಟಕ, ಯುವ ಘಟಕ ಹಾಗೂ ಕದಳಿ ವೇದಿಕೆ ಸಹಯೋಗದಲ್ಲಿ ಶ್ರಾವಣ ಮಾಸದ ನಿಮಿತ್ಯ ಹಮ್ಮಿಕೊಂಡ ವಚನ ಶ್ರಾವಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಶರಣರು ಭಕ್ತಿ ವೈರಾಗ್ಯಕಿಂತಲೂ ಜ್ಞಾನಕ್ಕೆ ಹೆಚ್ಚು ಮಹತ್ವ ನೀಡಿದ್ದಾರೆ.

ತನ್ನನ್ನು ತಾನು ಅರಿಯುವುದೇ ನಿಜವಾದ ಜ್ಞಾನವಾಗಿದೆ.ಸಾವಿರ ವಚನ ಓದುವುದಕ್ಕಿಂತಲೂ ಒಂದು ವಚನ ಅರ್ಥೈಸಿಕೊಂಡು ಬದುಕುವ ಅಗತ್ಯ ಇದೆ ಎಂದ ಅವರು ಶರಣರ ತತ್ವಾದರ್ಶ ಹಾಗೂ ಅವರ ವಚನಗಳ ಸಾರವನ್ನು ಮುಂದಿನ ಪೀಳಿಗೆಗೆ ತಿಳಿಸುವ ಕಾರ್ಯ ಎಲ್ಲರೂ ಸೇರಿ ಮಾಡಬೇಕಾಗಿದೆ ಎಂದರು.

ಪರಿಷತ್ತಿನ ತಾಲೂಕಾ ಘಟಕದ ಅಧ್ಯಕ್ಷ ಸಾಹಿತಿ ಅಶೋಕ ಹಂಚಲಿ ಅಧ್ಯಕ್ಷತೆ ವಹಿಸಿ ಮಾತನಾಡಿ ವಚನ ಸಾಹಿತ್ಯ ಎಚ್ಚರಿಸುವ ಸಾಹಿತ್ಯವಾಗಿದೆ. ವಚನ ಸಾಹಿತ್ಯದಲ್ಲಿ ಕೆಲವು ವಿಚಾರಗಳನ್ನು ಉಗ್ರವಾಗಿ ಖಂಡಿಸಲಾಗಿದೆ ಆದರೆ ಪ್ರತಿಶತ 95 ರಷ್ಟು ವಚನಗಳು ಮನಸ್ಸಿಗೆ ಸಂತೋಷವನ್ನು ನೀಡುವಂತಹವು ಆಗಿವೆ. ವೈಚಾರಿಕತೆ ಹೆಸರಿನಲ್ಲಿ ಮನಸ್ಸುಗಳನ್ನು ಕೆರಳಿಸುವ ಕಾರ್ಯವಾಗಬಾರದು ವೈಚಾರಿಕ ಚಿಂತನೆಗಳು ಆರೋಗ್ಯಪೂರ್ಣವಾಗಿರಬೇಕು. ಭೌತಿಕತೆಯ ವ್ಯಾಮೋಹದಿಂದಾಗಿ ಬದುಕಿನ ಉದ್ದೇಶವನ್ನು ಮರೆಯುತ್ತಿದ್ದೇವೆ ಈ ಜೀವನ ಕ್ಷಣಿಕ ಯಾವಾಗ ಮುಗಿದು ಹೋಗುತ್ತದೆ ಎಂಬುದು ಗೊತ್ತಿಲ್ಲ

ಆದರೆ ಭೂಮಿ ಮೇಲೆ ಇರುವಷ್ಟು ದಿನ ಶರಣರು ತೋರಿದ ಮಾರ್ಗದಲ್ಲಿ ನಡೆದು ಜೀವನ ಸಾರ್ಥಕ ಮಾಡಿಕೊಳ್ಳೋಣ ಎಂದರು. ಇದೇ ಸಂದರ್ಭದಲ್ಲಿ ಎಸ್ ಕೆ ಪದವಿ ಪೂರ್ವ ಕಾಲೇಜ್ ಪ್ರೌಢಶಾಲಾ ವಿಭಾಗದ ಹಿಂದಿ ವಿಷಯ ಶಿಕ್ಷಕ ಅನಿಲಕುಮಾರ ಬಿ.




ಇರಾಜ ಅವರಿಗೆ ಪಿ.ಎಚ್.ಡಿ.

ಪದವಿ ಪ್ರದಾನ ಮಾಡಿದ ಹಿನ್ನೆಲೆಯಲ್ಲಿ ವೇದಿಕೆಯಿಂದ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ಕದಳಿ ವೇದಿಕೆ ಅಧ್ಯಕ್ಷೆ ಶ್ರೀಮತಿ ಉಮಾ.ಜಿ.ಘೀವಾರಿ.ಯುವ ಘಟಕದ ಅಧ್ಯಕ್ಷ ಜಗದೀಶ ಬಿಳೇಭಾವಿ. ಮುಖ್ಯ ಶಿಕ್ಷಕರಾದ ಶರಣಬಸವ ಗಡೇದ.ಎಸ್.ಎಸ್.ಬಾಕಲಿ. ವರ್ತಕ ಮಹಾದೇವಪ್ಪ ಕುಂಬಾರ. ಗೌರವ ಕಾರ್ಯದರ್ಶಿ ಗಂಗಾಧರ ಕಸ್ತೂರಿ.ಜಿ.ಎಸ್.ಜಮ್ಮಲದಿನ್ನಿ.ಕಾಶಿನಾಥ ಮುರಾಳ.ಸಾಹೇಬಗೌಡ ಬಿರಾದಾರ. ಶಿವಲಿಂಗಪ್ಪ ಪಾಲ್ಕಿ. ಸಿದ್ದು ಕರಡಿ. ಪ್ರಭು ಸಣ್ಣಕ್ಕಿ. ಗುಂಡುರಾವ ಧನಪಾಲ. ಅಶೋಕ ಚಿನಗುಡಿ. ಮಲ್ಲನಗೌಡ ಪಾಟೀಲ.ವಾಲೀಕಾರ ಸರ್. ಶ್ರೀಮತಿ ಸುರೇಖಾ ಸಾಲಂಕಿ. ಸುಜಾತ ಪಾಟೀಲ.ಜಯಶ್ರೀ ಸಜ್ಜನ. ಶಿವಲೀಲಾ ಮುರಾಳ.

ಶಿಲ್ಪ ಸುಳೇಭಾವಿ. ಪ್ರಭಾವತಿ ಕತ್ತಿ. ಮೇಘಾ ಡಿ.ಬಿ. ಶ್ರೀಮತಿ ಎಸ್.ಎಚ್. ಪಾಟೀಲ.ಸಂಗೀತ ಬಳಗಾನೂರ. ನಿರ್ಮಲ ಕತ್ತಿ.

ರಾಜೇಶ್ವರಿ ಸಜ್ಜನ. ಅಕ್ಕಮಹಾದೇವಿ ಪಾಟೀಲ ಹಾಗೂ ಪರಿಷತ್ತಿನ ಪದಾಧಿಕಾರಿಗಳು ಇದ್ದರು. ಸಿದ್ದುಕರಡಿ ಸ್ವಾಗತಿಸಿದರು. ಶ್ರೀಮತಿ ಶಿವಲೀಲಾ ಮುರಾಳ ಪ್ರಾರ್ಥಿಸಿದರು. ಸಂಗಮೇಶ ಪಾಲ್ಕಿ ನಿರೂಪಿಸಿದರು. ಸಾಹಿಲ್ ಮುರಾಳ ವಂದಿಸಿದರು.

ವರದಿ: ಸುನೀಲ ಎಲ್ ತಳವಾರ ಮುಂಜಾನೆ ವಾರ್ತೆ ತಾಳಿಕೋಟಿ

Printed by : H.L.AMARANATH, Owned by: H.L.AMARANATH, Printed at : SREE MANJUNATHA ENTERPRISES No. 7, Tirugappa lane, Cottonpet cross, Cottonpet, Bangalore-560053.
Published at : No.97, 2nd Cross, Vivekanandanagar, Khadi Commission Layout, BSK 3rd Stage, Kathariguppe Main Road, Bengaluru-560085. Mobile: 9663122276 Editor : H.L.AMARANATH